ಸಂಪುಟ : 9 ಸಂಚಿಕೆ 98 ಪುಟ : 4 ಬೆಲೆ: 3.00 ರವಿವಾರ ಮೇ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 98 Pages : 4 Price : 3.00 sunday May 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ‘ಶರಣ ಸಂಗಮ’ ಕಾರ್ಯಕ್ರಮ ಇಂದು


■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ 19ರಂದು ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1594ನೇ ಶರಣ ಸಂಗಮದಲ್ಲಿ ವಚನ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣ ಎಂ.ಆರ್. ಜಿನಗಾ ವಚನ ಚಿಂತನೆ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಪುಲಿಗೆರೆಯ ಶ್ರೀ ಸೋಮೇಶ್ವರ ಮಹಾರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಆರಾಧ್ಯದೈವ ಪುಲಿಗೆರೆಯ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ನಿಮಿತ್ತ ಶನಿವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಶ್ರೀ ಸೋಮೇಶ್ವರ ಮಹಾರಥೋತ್ಸವ ಅತ್ಯಂತ ವಿಜೃಂಭ ಣೆಯಿಂದ ನೆರವೇರಿತು.

ಜಾತ್ರಾ ಮಹೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅಲಂಕಾರ ಮಾಡಲಾಗಿತ್ತು. ಬೆಳಗಿನಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ಧರಿಸಿ ದೇವಸ್ಥಾನಕ್ಕೆ ಆಗಮಿಸಿ, ಶ್ರೀ ಸೋಮೇಶ್ವರನಿಗೆ ಶೃದ್ಧಾ ಭಕ್ತಿಯಿಂದ ನಮಿಸಿದರು. ಹಣ್ಣು-ಕಾಯಿ ನೈವೇದ್ಯ ಮಾಡಿಸಿಕೊಂಡು ಬಳಿಕ ರಥ-ಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನಿರಿಸಿ ಪೂಜಿಸಿ ಕೃತಾರ್ಥರಾದರು.

ಶನಿವಾರ ಸಂಜೆ ಅಪಾರ ಭಕ್ತ ಸಮೂಹದೊಂದಿಗೆ ಜರುಗಿದ ಶ್ರೀ ಸೋಮೇಶ್ವರನ ಮಹಾರ ’ಥೋತ್ಸವಕ್ಕೆ ನಾಡಿನಾದ್ಯಂತ ಆಗಮಿಸಿದ್ದ ಭಕ್ತಗಣ ಸಾಕ್ಷಿಯಾಗಿತ್ತು. ಪಟ್ಟಣ ಸೇರಿ ತಾಲೂಕಿನಾದ್ಯಂತ ಸೇರಿದ್ದ ಅಪಾರ ಭಕ್ತ ಸಮೂಹ ಪಾಲ್ಗೊಂಡು ಭಕ್ತಿ-ಭಾವಗಳಿಂದ ಉತ್ತತ್ತಿ, ಹಣ್ಣುಗಳನ್ನು ತೇ-ೕರಿಗೆ ಎಸೆದರು. ಯುವಕರು ತೇರಿನ ಕಳಸಕ್ಕೆ ಗುರಿಯಿಟ್ಟು ಹಣ್ಣು, ಉತ್ತತ್ತಿ ಎಸೆಯುತ್ತಿದ್ದ ದೃಶ್ಯ ಕಂಡು ಬಂದಿತು. ನವ ದಂಪತಿಗಳು ತೇರಿನ ಕಳಸ ನೋಡಲು ಜಮಾಯಿಸಿದ್ದರು. ಮಹಾರಥೋತ್ಸವದ ಸಂದರ್ಭದಲ್ಲಿ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಕಮಿಟಿ, ಸೇವಾ ಸಮಿತಿಯ ಸರ್ವ ಸದಸ್ಯರು, ಮುಖ್ಯ ಅರ್ಚಕರು, ಹಿರಿಯರು ನೇತೃತ್ವ ವಹಿಸಿ ನಿರ್ವಹಿಸಿದರು.

ಜಾತ್ರಾಮ ಹೋತ್ಸವ ಹಿನ್ನೆಲೆಯಲ್ಲಿ ಶನಿವಾರ ಲಕ್ಷ್ಮೀದೇವಿ ಪೂಜೆ, ರಥಪೂಜೆ ಮತ್ತು ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನೆರವೇರಿತು. ಮೇ.19ರಂದು ಸಂಜೆ 5.30ಕ್ಕೆ ಕಡುಬಿನ ಕಾಳಗ. ಮೇ.20ರಂದು ಓಕಳಿ ಕಾರ್ಯಕ್ರಮದೊಂದಿಗೆ ಜಾತ್ರೆ ಸಂಪನ್ನಗೊಳ್ಳಲಿದೆ.

## ಬಾಲಕಿಯರ ಪ್ರೌಢಶಾಲೆ ಫಲಿತಾಂಶ ಶೇ 87.83



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಶೇ 87.83ರಷ್ಟು ಆಗಿದೆ.

ಪರೀಕ್ಷೆಗೆ ಹಾಜರಾದ ಒಟ್ಟು 74 ವಿದ್ಯಾರ್ಥಿಗಳಲ್ಲಿ 65 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಇದರಲ್ಲಿ 4 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 25 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 24 ವಿದ್ಯಾರ್ಥಿಗಳು ದ್ವಿತೀಯ ಹಾಗೂ 10 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಶೇ 84.32 ಅಂಕ ಪಡೆದ ಮಿಜಬಾನು ವಡಿಗೇರಿ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಶೇ 83.68 ಅಂಕ ಪಡೆದ ಪುಷ್ಪಾ ಹಣವಾಳ ದ್ವಿತೀಯ ಹಾಗೂ 81.68 ಅಂಕ ಪಡೆದ ಅಂಜನಾ ಹಡಗಲಿ ಶಾಲೆಗೆ ತೃತೀಯ ಸ್ಥಾನ ಪಡೆದಿದ್ದಾಳೆ.

ಉತ್ತಮ ಅಂಕ ಪಡೆದು ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳಿಗೆ ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ದಂಡಿನ ಹಾಗೂ ಮುಖ್ಯೋಪಾಧ್ಯಾಯ ವೈ.ಎಚ್. ತೆಕ್ಕಲಕೋಟಿ, ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

### ಹುಬ್ಬಳ್ಳಿಯ ಅಂಜಲಿ ಹತ್ಯೆ ಆರೋಪಿಯಿಂದ ರೈಲಿನಲ್ಲಿ ಮುಳಗುಂದದ ಮಹಿಳೆಗೆ ಚಾಕು ಇರಿತ


# ಇಲ್ಲದ ತಪ್ಪಿಗೆ ಇದೆಂಥಾ ಯಾತನೆ?

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸಿದ್ದ ಹುಬ್ಬಳ್ಳಿಯ ಅಂಜಲಿ ಅಂಬಿಗೇರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕ್ರೂರ ಆರೋಪಿ ವಿಶ್ವನಾಥ ಅಲಿಯಾಸ ಗಿರೀಶ ಸಾವಂತ ರೈಲಿನಲ್ಲಿ ಪರಾರಿಯಾಗುತ್ತಿದ್ದ ಸಂದರ್ಭದಲ್ಲಿ ಗದಗ ತಾಲೂಕಿನ ಮುಳಗುಂದ ಪಟ್ಟಣದ ಮಹಿಳೆಯೋರ್ವರಿಗೆ ಚಾಕು ಇರಿದ ಘಟನೆ ದಾವಣಗೆರೆ ಸಮಿಪ ನಡೆದಿದೆ.

ಮುಳಗುಂದ ಪಟ್ಟಣದ ಮಹಾಂತೇಶ ವೀರಭದ್ರಪ್ಪ ಸೊರಟೂರ ಇವರ ಪತ್ನಿ ಲಕ್ಷ್ಮೀ(29) ತನ್ನ ಪತಿ ಹಾಗೂ ಮಗನ ಸಮೇತ ತುಮಕೂರು ಸಿದ್ಧಗಂಗಾ ಶಿಕ್ಷಣ ಸಂಸ್ಥೆಯಲ್ಲಿ ಶಾಲಾ ದಾಖಲಾತಿಗಾಗಿ ರೈಲಿನಲ್ಲಿ ಪ್ರಯಾಣ ಮಾಡುತ್ತಿದ್ದ ಸಂದರ್ಭದಲ್ಲಿ ಮಧ್ಯಾಹ್ನ 2.30ರ ಸುಮಾರಿಗೆ ಮಹಿಳೆಯ ಜೊತೆ ಅನುಚಿತವಾಗಿ ವರ್ತಿಸಿದ್ದಲ್ಲದೆ, ಕೈಗೆ ಚಾಕುವಿನಿಂದ ಇರಿದಿದ್ದಾನೆ. ಸ್ಥಳದಲ್ಲಿಯೇ ತೀವ್ರ ಅಸ್ವಸ್ಥಗೊಂಡ ಲಕ್ಷ್ಮೀ ಅವರನ್ನು ದಾವಣಗೆರೆ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸಿಕ್ಕಿಬಿದ್ದ ಆರೋಪಿ ಗಿರೀಶ: ಹುಬ್ಬಳ್ಳಿಯಲ್ಲಿ ಯುವತಿಯನ್ನು ಕೊಂದ ಗಿರೀಶ ರೈಲಿನ ಮೂಲಕ ಹುಬ್ಬಳ್ಳಿಯಿಂದ ಪ್ರಯಾಣಿಸುತ್ತಿದ್ದ ಸಂದರ್ಭದಲ್ಲಿ



ಮಹಿಳೆಯ ಕೈಗೆ ಚಾಕು ಇರಿದ ಸಂದರ್ಭದಲ್ಲಿ ಮಹಿಳೆಯ ಪತಿ ಪ್ರತಿರೋಧ ಒಡ್ಡಿದ ಕಾರಣಕ್ಕೆ ಬೇರೆ ಬೋಗಿಗೆ ಕಾಲ್ಕಿತ್ತಿದ್ದಾನೆ. ಘಟನೆಯ ಕುರಿತು ರೈಲ್ವೇ ಪೊಲೀಸರಿಗೆ ಮಾಹಿತಿ ನೀಡಿ, ದಾವಣಗೆರೆ ರೈಲು ನಿಲ್ದಾಣದಲ್ಲಿ ಆರೋಪಿಯನ್ನು ವಶಕ್ಕೆ ಪಡೆದ ನಂತರವಷ್ಟೇ ಈತ ಹುಬ್ಬಳ್ಳಿಯಲ್ಲಿ ಅಂಜಲಿಯನ್ನು ಹತ್ಯೆ ಮಾಡಿದ ಆರೋಪಿ ಎಂದು ಪತ್ತೆಯಾಗಿದೆ.

ಮಹಿಳೆ ಆಸ್ಪತ್ರೆಗೆ ದಾಖಲು: ರೈಲಿನಲ್ಲಿ ಹಲ್ಲೆಗೊಳಲಾದ ಲಕ್ಷ್ಮೀ ದಾವಣಗೆರೆಯ ಯಶಸ್ವಿನಿ ಆಸ್ಪತೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆದರೆ,

> ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಸಂದರ್ಭದಲ್ಲಿ ನನ್ನ ಹೆಂಡತಿಯ ಜೊತೆ ಅನುಚಿತವಾಗಿ ವರ್ತಿಸಿದ್ದರಿಂದ ಸಿಟ್ಟಿಗೆದ್ದು ಬೈದಾಡಿದ್ದಾಳೆ. ಕೂಡಲೇ ತನ್ನ ಬಳಿಯಿದ್ದ ಚಾಕುವಿನಿಂದ ನನ್ನ ಹೆಂಡತಿಗೆ ಹಲ್ಲೆ ಮಾಡಿದ್ದಾನೆ. ರೈಲಿನಲ್ಲಿ ಹೆಚ್ಚು ಜನರಿದ್ದ ಕಾರಣ, ಧ್ವನಿಯೇರಿಸಿ ಬೈದಾಗ, ತಪ್ಪಿಸಿಕೊಂಡು ಬೇರೆ ಬೋಗಿಗೆ ಓಡಿ ಹೋಗಿದ್ದಾನೆ. ಪತ್ನಿ ತೀವ್ರ ರಕ್ತಸ್ರಾವದಿಂದ ಬಳಲುತ್ತಿದ್ದರಿಂದ, ನಾವು ರೈಲ್ವೇ ಪೊಲೀಸರಿಗೆ ಮಾಹಿತಿ ನೀಡಿದೆವು. ದಾವಣಗೆರೆ ರೈಲ್ವೇ ಸ್ಟೇಷನ್‌ನಲ್ಲಿ ಆರೋಪಿಯನ್ನು ಹಿಡಿಯಲಾಯಿತು. ರೈಲ್ವೇ ಪೊಲೀಸರು ನಮಗೆ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ಹೋಗಲು ತಿಳಿಸಿದರು. ಹೆಚ್ಚು ಗಾಯವಾಗಿದ್ದರಿಂದ ಖಾಸಗಿ ಆಸ್ಪತ್ರೆಗೆ ಹೋಗಲು ಸಲಹೆ ನೀಡಿದರು. ಈಗ ಆಪರೇಷನ್ ಮಾಡಲಾಗಿದ್ದು, ಬಡವರಾದ ನಮಗೆ ಕೈಯಲ್ಲಿ ಹಣವಿಲ್ಲದೆ ದಿಕ್ಕು ಕಾಣದಂತಾಗಿದೆ ಎಂದು ಗಾಯಾಳು ಲಕ್ಷ್ಮೀ ಅವರ ಪತಿ ಮಹಾಂತೇಶ ವೀರಭದ್ರಪ್ಪ ಸೊರಟೂರ ತಮ್ಮ ಅಳಲು ತೋಡಿಕೊಂಡರು.

ಅಂಜಲಿ ಹತ್ಯೆಯ ನಂತರ ಮಾನಸಿಕ ಸ್ಥಿಮಿತ ಕಳೆದುಕೊಂಡವನಂತೆ ವರ್ತಿಸಿ, ಬಡ ಕುಟುಂಬದ ಅಮಾಯಕ ಮಹಿಳೆಗೆ ಚಾಕು ಇರಿದು ಗಾಯಗೊಳಿಸಿದ ಘಟನೆಗೆ ಕುಟುಂಬಸ್ಥರು ಕಣ್ಣೀರು ಹಾಕುವಂತಾಗಿದೆ.

ಯಲವಿಗಿ ರೈಲು ನಿಲ್ದಾಣದಿಂದ ತುಮಕೂರಿಗೆ ಪ್ರಯಾಣಿಸುತ್ತಿದ್ದ ದಂಪತಿ ಗಿರೀಶನ ಅಮಾನವೀಯ ಕೃತ್ಯದಿಂದ ಸಂಕಷ್ಟ ಎದುರಿಸುವಂತಾಗಿದ್ದು, ಕೂಲಿ-ನಾಲಿ ಮಾಡಿ ಜೀವನ ನಡೆಸುತ್ತಿದ್ದ ದಂಪತಿ ಈಗ ತಮ್ಮದಲ್ಲದ ತಪ್ಪಿಗೆ ಪರಿತಪಿಸುವಂತಾಗಿದೆ. ಸದ್ಯ ದಾವಣಗೆರೆಯ ಖಾಸಗಿ ಆಸ್ಪತ್ರೆಯಲ್ಲಿ ಮಹಿಳೆ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದು, ಆಸ್ಪತ್ರೆಯ ಶುಲ್ಕ ತುಂಬಲೂ ಹಣ ಇಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.



# ಸಾಲ ನೀಡುವಲ್ಲಿ ವಿಳಂಬ ಬೇಡ

■ ವಿಜಯಸಾಕ್ಷಿ ಸುದ್ದಿ, ಗದಗ

ವಿವಿಧ ಇಲಾಖೆಯಿಂದ ಸಬ್ಸಿಡಿ ಸಹಿತ ಸಾಲ ನೀಡುವಾಗ ಬ್ಯಾಂಕ್ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೇ ಕಾರ್ಯನಿರ್ವಹಿಸಬೇಕು ಎಂದು ಜಿ.ಪಂ ಸಿಇಒ ಭರತ್ ಎಸ್ ಹೇಳಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಲೀಡ್ ಬ್ಯಾಂಕ್‌ನ ಡಿಎಲ್‌ಆರ್‌ಸಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಇಖೆಯ ನೆಟ್‌ವರ್ಕ್, ಠೇವಣಿಗಳು, ಮುಂಗಡಗಳು ಮತ್ತು ಬ್ಯಾಂಕ್‌ಗಳ ಸಾಲ ಠೇವಣಿ (ಸಿಡಿ) ಅನುಪಾತದ ವರದಿಯನ್ನು ಪಡೆದು ಮಾತನಾಡಿ, ಬ್ಯಾಂಕ್ ಮ್ಯಾನೇಜರ್‌ಗಳು ರೈತರು ಮತ್ತು ಸಾರ್ವಜನಿಕರಿಗೆ




ಒದಗಿಸಬೇಕಾದ ಸೌಲಭ್ಯಗಳನ್ನು ವಿಳಂಬ ಮಾಡದೇ ಸಮಯಕ್ಕೆ ಸರಿಯಾಗಿ ನೀಡಬೇಕು ಎಂದು ಸೂಚಿಸಿದರು. ಲೀಡ್ ಬ್ಯಾಂಕ್‌ನ ಮ್ಯಾನೇಜರ್ ಜಬ್ಬಾರ್, ಎಸಿಪಿ ಮತ್ತು ಆದ್ಯತಾ ವಲಯದ ಸಾಲದ ಅಡಿಯ ಸಾಧನೆ, ಪಿಎಂಎಸ್ ನಿಧಿ ಅಡಿಯ ಸಾಧನೆ, ಸರ್ಕಾರಿ ಪ್ರಾಯೋಜಿತ ಯೋಜನೆ ಸಾಲಗಳ ಅಡಿಯಲ್ಲಿ ಸಾಧನೆ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳ ಸಾಧನೆ ಕುರಿತು ವರದಿಯನ್ನು ನೀಡಿ, ಆರ್‌ಬಿಐ ಹೊರಡಿಸಿದ ಇತ್ತೀಚಿನ ಮಾರ್ಗಸೂಚಿಗಳ ಕುರಿತು ಮಾಹಿತಿ ನೀಡಿದರು. ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು, ಎಲ್ಲಾ ಬ್ಯಾಂಕಿಗಳಲ್ಲಿ ಸೈಬರ್ ಕ್ರೈಮ್ ಸಹಾಯವಾಣಿ ಸಂಖ್ಯೆ 1930 ಲಗತ್ತಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಎಲ್ಲಾ ಪ್ರಾದೇಶಿಕ ಬ್ಯಾಂಕ್ ಮ್ಯಾನೇಜರ್, ಜಿಲ್ಲಾ ಸಂಯೋಜಕರು, ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಬರ ಪರಿಹಾರ ಹಣವನ್ನು ಸಾಲದ ಖಾತೆಗೆ ಜಮಾ ಮಾಡದಂತೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚನೆ

# ಸೂಕ್ತ ಸಮಯಕ್ಕೆ ಸೌಲಭ್ಯ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸರಕಾರವು ಯಾವುದೇ ಪ್ರೋತ್ಸಾಹ ಧನ ಅಥವಾ ಸಹಾಯ ಧನವನ್ನು ರೈತರ ಹಾಗೂ ಸಾರ್ವಜನಿಕರ ಜೀವನೋಪಾಯಕ್ಕಾಗಿ ಬಿಡುಗಡೆ ಮಾಡುತ್ತದೆ. ಆದ್ದರಿಂದ ಬರ ಪರಿಹಾರದ ಹಣ ಸೇರಿದಂತೆ ವೃದ್ಧಾಪ್ಯ ವೇತನ, ಅಂಗವಿಕಲರ ಮಾಶಾಸನ, ನರೇಗಾ ಕೂಲಿ ಹಾಗೂ ಸರಕಾರದಿಂದ ಬಿಡುಗಡೆ ಆಗಿರುವ ಯಾವುದೇ ಪ್ರೋತ್ಸಾಹಧನವನ್ನು ಸಾಲದ ಖಾತೆಗೆ ಜಮಾ ಮಾಡಬಾರದೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಧಾರವಾಡದ ರುಡ್‌ಸೆಟ್ ಆವರಣದ ಸಭಾಂಗಣದಲ್ಲಿ ಆರ್.ಬಿ.ಐ ಅಧಿಕಾರಿ ಮೋನಿ ರಾಜ ಬ್ರಹ್ಮ, ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಪ್ರಭುದೇವ ಎನ್.ಜಿ. ಅವರ ಉಪಸ್ಥಿತಿಯಲ್ಲಿ ಜಿಲ್ಲೆಯ ಎಲ್ಲಾ ಬ್ಯಾಂಕಿನ ವ್ಯವಸ್ಥಾಪಕರುಗಳ ಜೊತೆ ತುರ್ತು ಸಭೆಯನ್ನು ಜರುಗಿಸಿ, ಮಾತನಾಡಿದರು.



ಧಾರವಾಡ ಜಿಲ್ಲೆಯಲ್ಲಿ ಬ್ಯಾಂಕ್‌ಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ. ಸರಕಾರದ ಯೋಜನೆಗಳ ಲಾಭವನ್ನು ತಲುಪಿಸುತ್ತಿವೆ. ಆದರೆ ಎಲ್ಲ ಬ್ಯಾಂಕ್‌ಗಳು ಇದನ್ನು ಅನುಸರಿಸಬೇಕು. ಸರಿಯಾದ ಸಮಯಕ್ಕೆ ಸಾಲ, ಸಹಾಯಧನ ಸೌಲಭ್ಯ ದೊರೆಯಬೇಕು ಎಂದರು.

ರೈತರ ಸಹಮತವಿಲ್ಲದೆ ಬರಪರಿಹಾರ ಸೇರಿದಂತ ಯಾವುದೇ ಪ್ರೋತ್ಸಾಹಧನವನ್ನು ಸಾಲಕ್ಕೆ ಜಮೆ ಮಾಡಬಾರದು. ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಎಲ್ಲ ಬ್ಯಾಂಕ್ ಶಾಖೆಗಳಿಗೆ ಮಾಹಿತಿ ನೀಡಿ, ರೈತರಿಗೆ ತೊಂದರೆ ಆಗದಂತೆ ನಿರಂತರ ನಿಗಾ ವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಆರ್.ಬಿ.ಐ ಅಧಿಕಾರಿ ಮೋನಿ ರಾಜ ಬ್ರಹ್ಮ ಆರ್.ಬಿ.ಐನ ಮಾರ್ಗಸೂಚಿ ಮತ್ತು ನೀತಿಯನ್ನು ವಿವರಿಸಿದರು. ಸಭೆಯಲ್ಲಿ ಎಸ್.ಬಿ.ಐ, ಕೆನರಾ, ಕೆವಿಜಿಬಿ, ಬ್ಯಾಂಕ್ ಆಫ್ ಬರೋಡಾ, ಯುನಿಯನ್ ಬ್ಯಾಂಕ್ ಆಫ್ ಇಂಡಿಯಾ ಸೇರಿದಂತೆ ಜಿಲ್ಲೆಯ ಎಲ್ಲಾ ಬ್ಯಾಂಕ್ ಅಧಿಕಾರಿಗಳು ಭಾಗವಹಿಸಿದ್ದರು.

# ಇಂದು ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಟ್ಟಡ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಲಕೋಟಿಯ ಸ್ವಾಮಿ ವಿವೇಕಾನಂದ ಪಿಯು ಕಾಲೇಜ್ ಆವರಣದಲ್ಲಿ ಕೆ.ಎಚ್. ಪಾಟೀಲ ಸೆಂಟರ್ ಫಾರ್ ಹ್ಯೂಮನ್ ಎಕ್ಸಲೆನ್ಸ್ ವತಿಯಿಂದ ಸಹಕಾರ ಭೀಷ್ಮ ಕೆ.ಎಚ್. ಪಾಟೀಲ ಜನ್ಮ ಶತಮಾನೋತ್ಸವ ಸಂಭ್ರಮದ ಹಿನ್ನೆಲೆಯಲ್ಲಿ ಆರ್‌ಎಂಎಸ್ ಸಂಸ್ಥೆಯ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಟ್ಟಡ ಉದ್ಘಾಟನೆ ಮೇ 19ರಂದು ಸಂಜೆ 4ಕ್ಕೆ ಜರುಗಲಿದೆ.



ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಉದ್ಘಾಟಿಸುವರು.

ಮಾಜಿ ಶಾಸಕ, ಕೆ.ಎಚ್. ಪಾಟೀಲ ಪ್ರತಿಷ್ಠಾನದ ಅಧ್ಯಕ್ಷ ಡಿ.ಆರ್. ಪಾಟೀಲ ಅಧ್ಯಕ್ಷತೆ ವಹಿಸುವರು. ಹಾವೇರಿ ಜಿಲ್ಲೆಯ ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾ ಲಯದ ಉಪಕುಲಪತಿ ಡಾ। ಟಿ.ಎಂ. ಭಾಸ್ಕರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಇದೇ ವೇಳೆ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 4ನೇ ಹಾಗೂ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಸಮೃದ್ಧಿ ಶ್ರೀಧರ ಸಿದ್ಲಿಂಗ್ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ತೃತೀಯ ಸ್ಥಾನ ಪಡೆದ ಸ್ವಾಮಿ ವಿವೇಕಾನಂದ ಪಿಯು ಕಾಲೇಜಿನ ವಿದ್ಯಾರ್ಥಿನಿ ವಿದ್ಯಾ ಮುದರಡ್ಡಿ ಅವರಿಗೆ ಸನ್ಮಾನ ಜರುಗಲಿದೆ ಎಂದು ಕೆ.ಎಚ್. ಪಾಟೀಲ ಪ್ರತಿಷ್ಠಾನ ಹಾಗೂ ಆರ್‌ಎಂಎಸ್ ಸಂಸ್ಥೆಯ ಪದಾಧಿಕಾರಿಗಳು ತಿಳಿಸಿದ್ದಾರೆ.

## ಪ್ರಧಾನಿ ಮೋದಿ ಜನರನ್ನು ಪ್ರಚೋದಿಸುತ್ತಿದ್ದಾರೆ, ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು

■ವಿಜಯಸಾಕ್ಷಿ ಸುದ್ದಿ, ಮುಂಬೈ



'ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷ ಅಧಿಕಾರಕ್ಕೆ ಬಂದರೆ ಅಯೋಧ್ಯೆಯ ರಾಮಮಂದಿರದ ಮೇಲೆ ಬುಲ್ಡೋಜರ್ ಹರಿಸಲಿದೆ' ಎಂದು ಹೇಳುವ ಮೂಲಕ ಪ್ರಧಾನಿ ಮೋದಿ ಜನರನ್ನು ಪ್ರಚೋದಿಸುವ ಕೆಲಸ ಮಾಡುತ್ತಿದ್ದಾರೆ. ಅವರ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಗ್ರಹಿಸಿದ್ದಾರೆ.

"ನಾವು ಇಲ್ಲಿಯವರೆಗೆ ಬುಲ್ಡೋಜರ್‌ಗಳನ್ನು ಬಳಸಿಲ್ಲ. ಪ್ರಚೋದನಕಾರಿ ಭಾಷಣ ಮಾಡುವವರ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು. ಪ್ರಧಾನಿಯೇ ಜನರನ್ನು ಪ್ರಚೋದಿಸುತ್ತಿದ್ದಾರೆ. ನಮ್ಮ ಸರ್ಕಾರ ಬಂದ ನಂತರ ಸಂವಿಧಾನದ ಪ್ರಕಾರ ಎಲ್ಲವನ್ನೂ ರಕ್ಷಿಸಲಾಗುವುದು. ನಾವು ಸಂವಿಧಾನವನ್ನು ಅನುಸರಿಸುತ್ತೇವೆ ಎಂದು ಖರ್ಗೆ ಹೇಳಿದ್ದಾರೆ.

ಮುಂಬೈನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಖರ್ಗೆ ಮಾತನಾಡಿದರು. ನ್ಯಾಷನಲಿಸ್ಟ್ ಕಾಂಗ್ರೆಸ್ ಪಾರ್ಟಿ (ಎಸ್‌ಪಿ) ಶರದ್ ಪವಾರ್ ಮತ್ತು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಈ ವೇಳೆ ಉಪಸ್ಥಿತರಿದ್ದರು.


"ಇಂಡಿಯಾ ಮೈತ್ರಿಕೂಟ ಮಹಾರಾಷ್ಟ್ರದ 48 ಸ್ಥಾನಗಳ ಲೋಕಸಭಾ ಸ್ಥಾನಗಳ ಪೈಕಿ 46ರನ್ನು ಗೆಲ್ಲಲಿದೆ. ಇದನ್ನು ಜನರೇ ಹೇಳುತ್ತಿದ್ದಾರೆ. ನಮ್ಮ ಮೈತ್ರಿಕೂಟ ಗರಿಷ್ಠ ಸ್ಥಾನಗಳನ್ನು ಗೆದ್ದು ಬಿಜೆಪಿಯನ್ನು ಸೋಲಿಸಲಿದೆ ಎಂದು ಖರ್ಗೆ ಹೇಳಿದ್ದಾರೆ.

ಮಹಾರಾಷ್ಟ್ರದ ನೈಜ ಪಕ್ಷಗಳಿಂದ ಚಿಹ್ನೆಗಳನ್ನು ಕಿತ್ತುಕೊಂಡು ಬಿಜೆಪಿ ಬೆಂಬಲಿತ ಪಕ್ಷಗಳಿಗೆ ನೀಡಲಾಗಿದೆ ಎಂದು ಶಿವಸೇನೆ ಮತ್ತು ಎನ್‌ಸಿಪಿಯನ್ನು ಉಲ್ಲೇಖಿಸಿ ಖರ್ಗೆ ವಿಷಾದ ವ್ಯಕ್ತಪಡಿಸಿದರು.

"ಮಹಾರಾಷ್ಟ್ರದ ಅಕ್ರಮ 'ಮಹಾಯುತಿ' ಸರ್ಕಾರವನ್ನು ದ್ರೋಹ ಮತ್ತು ಪಿತೂರಿಯ ಆಧಾರದ ಮೇಲೆ ರಚಿಸಲಾಗಿದೆ. ಅದನ್ನು ಸ್ವತಃ ಪ್ರಧಾನಿ ಬೆಂಬಲಿಸುತ್ತಿದ್ದಾರೆ. ಮೋದಿ ಹೋದಲ್ಲೆಲ್ಲಾ ಜನರ ನಡುವೆ ಬಿರುಕು ಮೂಡಿಸಲು ಪ್ರಯತ್ನಿಸುತ್ತಿದ್ದಾರೆ. ನಿಜವಾದ ಪಕ್ಷಗಳಿಂದ ಚಿಹ್ನೆಗಳನ್ನು ಕಸಿದು ಬಿಜೆಪಿ ಬೆಂಬಲಿಸುವ ಪಕ್ಷಗಳಿಗೆ ನೀಡಲಾಗಿದೆ. ಇದು ನ್ಯಾಯಾಲಯ ಮತ್ತು ಚುನಾವಣಾ ಆಯೋಗದ ನಿರ್ಧಾರ. ಆದರೆ, ಎಲ್ಲವೂ ಮೋದಿಯವರ ಸೂಚನೆಯ ಮೇರೆಗೆ ನಡೆಯುತ್ತಿದೆ ಎಂದು ಖರ್ಗೆ ಆರೋಪಿಸಿದ್ದಾರೆ.

## ಮತದಾನ ನಡೆದ 48 ಗಂಟೆಗಳಲ್ಲಿ ಅಂಕಿಅಂಶಗಳ ಬಿಡುಗಡೆ: ಚು. ಆಯೋಗದಿಂದ ಪ್ರತಿಕ್ರಿಯೆ ಕೇಳಿದ ಸುಪ್ರೀಂಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಮತದಾನ ಮುಗಿದ 48 ಗಂಟೆಗಳ ಒಳಗೆ ಮತದಾನ ಕೇಂದ್ರವಾರು ಮತದಾರರ ಅಂಕಿಅಂಶಗಳನ್ನು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ನಿರ್ದೇಶನ ನೀಡುವಂತೆ ಕೋರಿ ಎನ್‌ಜಿಓ ಎಡಿಆರ್ ಸಲ್ಲಿಸಿದ ಮನವಿಗೆ ಸುಪ್ರೀಂಕೋರ್ಟ್ ಶುಕ್ರವಾರ ಒಂದು ವಾರದೊಳಗೆ ಭಾರತೀಯ ಚುನಾವಣಾ ಆಯೋಗದಿಂದ (ಇಸಿಐ) ಪ್ರತಿಕ್ರಿಯೆ ಕೇಳಿದೆ.

ಮುಖ್ಯ ನ್ಯಾಯಮೂರ್ತಿ ಡಿ ವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಜೆ ಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠವು ಈ ವಿಷಯದ ಕುರಿತು ಎನ್‌ಜಿಓ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್) ಸಲ್ಲಿಸಿದ ಅರ್ಜಿಯನ್ನು ವಿಚಾರಣೆಗೆ ಕೈಗೆತ್ತಿಕೊಂಡಿದೆ. ಪೀಠವು ಚುನಾವಣಾ ಆಯೋಗದ ಪರ ವಕೀಲ ಅಮಿತ್ ಶರ್ಮಾ ಅವರಲ್ಲಿ ತನ್ನ ವೆಬ್‌ಸೈಟ್‌ನಲ್ಲಿ ಮತದಾರರ ಮತದಾನದ ವಿವರಗಳನ್ನು ಹಾಕಲು ನಿಮಗೆ ಏನು ತೊಂದರೆ ಇದೆ ಎಂದು ಕೇಳಿದೆ.

ಅರ್ಜಿ ವಿಚಾರಣೆ ವೇಳೆ ಇದಕ್ಕೆ ಸಮಯ ತೆಗೆದುಕೊಳ್ಳುತ್ತದೆ. ನಾವು ಸಾಕಷ್ಟು ಡೇಟಾವನ್ನು ಸಂಗ್ರಹಿಸಬೇಕಾಗಿದೆ, ಎಂದು ಚುನಾವಣಾ ಆಯೋಗದ ಪರ ವಕೀಲರು ಹೇಳಿದ್ದಾರೆ. ಅರ್ಜಿಗೆ ಉತ್ತರಿಸಲು ಚುನಾವಣಾ ಆಯೋಗಕ್ಕೆ ಆರನೇ ಹಂತದ ಚುನಾವಣೆಗಳ ಮುನ್ನಾ ದಿನವಾದ ಮೇ 24ರವರೆಗೆ ಕಾಲಾವಕಾಶವನ್ನು ನೀಡಲಾಗಿದೆ.

ಎನ್‌ಜಿಓ ಎಡಿಆರ್ ಪ್ರತಿನಿಧಿಸುವ ವಕೀಲ ಪ್ರಶಾಂತ್ ಭೂಷಣ್ ಈ ವಿಷಯವನ್ನು ಪ್ರಸ್ತಾಪಿಸಿದ್ದು, ಅರ್ಜಿಯನ್ನು ತುರ್ತು ವಿಚಾರಣೆಗೆ ಪಟ್ಟಿ ಮಾಡುವಂತೆ ಮನವಿ ಮಾಡಿದ್ದರು. ಕಳೆದ ವಾರ ಓಉಔ ತನ್ನ 2019ರ ಸಾರ್ವಜನಿಕ ಹಿತಾಸಕ್ತಿ ದಾವೆಗಳ ಭಾಗವಾಗಿ ಈ ಕುರಿತು ಮಧ್ಯಂತರ ಅರ್ಜಿಯನ್ನು ಸಲ್ಲಿಸಿತ್ತು. ಮತದಾನದ ನಂತರದ ಎಲ್ಲಾ ಮತಗಟ್ಟೆಗಳಿಂದ ಪಡೆದ ಸ್ಪಷ್ಟವಾದ ಮಾಹಿತಿಗಳನ್ನು ತಕ್ಷಣವೇ ಅಪ್‌ಲೋಡ್ ಮಾಡಲು ಚುನಾವಣಾ ಆಯೋಗಕ್ಕೆ ನಿರ್ದೇಶನಗಳನ್ನು ನೀಡುವಂತೆ ಕೋರಲಾಗಿತ್ತು.

ಲೋಕಸಭಾ ಚುನಾವಣೆಯ ಆರಂಭಿಕ ಎರಡು ಹಂತಗಳಲ್ಲಿ ನಡೆದ ಮತದಾನದಲ್ಲಿ ಆಯಾ ಮತದಾನದ ದಿನಗಳಲ್ಲಿ ಬಹಿರಂಗಪಡಿಸಿದ ಆರಂಭಿಕ ಅಂದಾಜು ಅಂಕಿ-ಅಂಶಗಳು ಮತ್ತು ಆ ಬಳಿಕ ಚುನಾವಣಾ ಆಯೋಗ ಬಹಿರಂಗಪಡಿಸಿದ ಅಂಕಿ-ಅಂಶಗಳಲ್ಲಿನ ವ್ಯತ್ಯಾಸಗಳಿಂದ ಸಂಶಯ ಸೃಷ್ಟಿಯಾಗಿದ್ದು, ಇದರ ಭಾಗವಾಗಿ ಅರ್ಜಿಯನ್ನು ಸಲ್ಲಿಸಲಾಗಿದೆ.

ಅಪ್ಲಿಕೇಶನ್ ಪ್ರಕಾರ, ಏಪ್ರಿಲ್ 30ರಂದು ಬಿಡುಗಡೆಯಾದ ಡೇಟಾವು ಮತದಾನದ ದಿನದಂದು ಚುನಾವಣಾ ಆಯೋಗ ಘೋಷಿಸಿದ ಪ್ರಾಥಮಿಕ ಶೇಕಡಾವಾರುಗಳಿಗೆ ಹೋಲಿಸಿದರೆ ಅಂತಿಮ ಮತದಾರರ ಮತದಾನದ ಅಂಕಿಅಂಶಗಳಲ್ಲಿ ಗಮನಾರ್ಹ ಏರಿಕೆ ಅಂದರೆ ಅಂದಾಜು 5–6% ಕಂಡು ಬಂದಿದೆ. ಇದಲ್ಲದೆ ಅಂಕಿ-ಅಂಶಗಳ ಬಿಡುಗಡೆಯಲ್ಲಿನ ವಿಳಂಬವು ಸಂಶಯಕ್ಕೆ ಕಾರಣವಾಗಿದೆ.

ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ADR)ನ ಅರ್ಜಿಯು, ಗಿಗಿಕಂಖಿ ಸ್ಲಿಪ್‌ಗಳನ್ನು, ಎಲೆಕ್ಟ್ರಾನಿಕ್ ಮತಯಂತ್ರಗಳ (EVM) ಮೂಲಕ ಚಲಾಯಿಸಿದ ಮತಗಳೊಂದಿಗೆ ಎಣಿಸುವ ಮನವಿಯ ಭಾಗವಾಗಿದೆ, ಆದರೆ ಈ ಮನವಿಯನ್ನು ಏಪ್ರಿಲ್ 26 ರಂದು ಸುಪ್ರೀಂಕೋರ್ಟ್ ತಿರಸ್ಕರಿಸಿತ್ತು.

### ಎಸ್.ವಾಯ್.ಬಿ.ಎಂ.ಎಸ್. ಯೋಗ ಪಾಠಶಾಲೆಯ 49ನೇ ವಾರ್ಷಿಕೋತ್ಸವದ ನಿಮಿತ್ತ ಲೇಖನ

# ಸುವರ್ಣ ಮಹೋತ್ಸವದತ್ತ ಹೆಜ್ಜೆ

ನಮ್ಮ ನಾಡಿನ ಸಂಸ್ಕೃತಿ-ಪರಂಪರೆ-ಇತಿಹಾಸ ಅವಲೋಕಿಸಿದಾಗ ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಮುಂತಾದ ಕ್ಷೇತ್ರಗಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಮಠಗಳಲ್ಲಿ ಗದುಗಿನ ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠ ಡಂಬಳ-ಗದಗ ಮಠವು ಗೌರವಾನ್ವಿತ ಸ್ಥಾನದಲ್ಲಿದೆ. ಶ್ರೀಮಠವು ತನ್ನ ಅಂಗ ಸಂಸ್ಥೆಗಳ ಮೂಲಕ ಅನೇಕ ಜನೋಪಯೋಗಿ ಸೇವಾಕಾರ್ಯಗಳನ್ನು ಮಾಡುತ್ತಿರುವುದು. ಇಂಥವುಗಳಲ್ಲಿ ಶ್ರೀ ಮನ್ನಿರಂಜನ ಯಳಂದೂರು ಬಸವಲಿಂಗ ಮಹಸ್ವಾಮಿಗಳವರ ಸ್ಮಾರಕ ಯೋಗ ಪಾಠಶಾಲೆಯು ವಿಶಿಷ್ಠ ಸಂಸ್ಥೆಯಾಗಿದೆ.

'ಇಂದು ನಮ್ಮ ನಾಡಿಗೆ ಬೇಕಾಗಿರುವುದು ಅಖಂಡ ಆತ್ಮವಿಶ್ವಾಸದ, ವೀರ್ಯವತ್ತಾದ ಆತ್ಮ ತೇಜೋಬಲದಿಂದ ತೊಳಗಿ ಬೆಳಗುವ ಕಬ್ಬಿಣ ಸ್ನಾಯುಗಳ, ಉಕ್ಕಿನ ನರಗಳ ಪುರುಷಸಿಂಹರು' ಸ್ವಾಮಿ ವಿವೇಕಾನಂದರ ಆಶೆಯ ಮೇರೆಗೆ ನಮ್ಮ ದೇಶದ ಬೆನ್ನೆಲುಬಾದ ಯುವಶಕ್ತಿ ವಿಚ್ಛಿದ್ರಕಾರಕ ಕಾರ್ಯಗಳಲ್ಲಿ ತೊಡಗುತ್ತಿರುವುದನ್ನು ಮನಗಂಡು ಅವರನ್ನು ಸದೃಢ ಕಟ್ಟಾಳುಗಳನ್ನಾಗಿ ಮಾಡಿ ದೇಶಕ್ಕೆ ಅಮೃತ ಪುತ್ರರನ್ನು ಒದಗಿಸಬೇಕೆಂಬ ಸಂಕಲ್ಪದಿಂದ ತ್ರಿವಿಧ ದಾಸೋಹಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರು ಸ್ಥಾಪಿಸಿದ ಯೋಗ ಪಾಠಶಾಲೆ ಸ್ಥಾಪನೆಯಾದಾಗಿನಿಂದ (1975) ಈವರೆಗೆ ಯೋಗ ಶಿಕ್ಷಣ ಪ್ರಸಾರ ಸೇವೆಯಲ್ಲಿ ತೊಡಗಿದೆ.

ಈ ನಿಟ್ಟಿನಲ್ಲಿ ಯೋಗ ಶಿಕ್ಷಣ ಪ್ರಸಾರ-ಪ್ರಚಾರ, ಯೋಗ ಶಿಬಿರ, ಪ್ರದರ್ಶನ ಹಮ್ಮಿಕೊಳ್ಳುವುದು, ಯೋಗಾಸನ ಸ್ಪರ್ಧೆ, ಉಪನ್ಯಾಸ, ಕಾರ್ಯಾಗಾರಗಳನ್ನು ಹಮ್ಮಿಕೊಳ್ಳುವ ಮೂಲಕ ಜನಗಳಲ್ಲಿ ಯೋಗದ ಬಗೆಗೆ ಅರಿವು ಮೂಡಿಸುವ ವಿದಾಯಕ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ. ಸಾರ್ವಜನಿಕವಾಗಿ ಪ್ರತಿದಿನ ಮುಂಜಾನೆ 6ರಿಂದ 7.30ವರೆಗೆ ಹಾಗೂ ಸಾಯಂಕಾಲ 5ರಿಂದ 6ರವರೆಗೆ ತಪ್ಪದೇ ಯೋಗ ತರಬೇತಿ ವರ್ಗ ನಡೆಸುವುದು. ಬೇಸಿಗೆಯ ರಜೆಯಲ್ಲಿ ಶಾಲಾ ಮಕ್ಕಳಿಗಾಗಿ ಸಂಸ್ಕೃತಿ-ಸಂಸ್ಕಾರ ಶಿಬಿರ ಹಮ್ಮಿಕೊಂಡು ಅವರಿಗೆ ಯೋಗ, ನೀತಿ ಶಿಕ್ಷಣ, ಆಟೋಟ, ವಚನ ಗಾಯನ ಹೀಗೆ ರಚನಾತ್ಮಕವಾದ ಕಾರ್ಯಕ್ರಮಗಳಿಂದ ಮಕ್ಕಳು ಮಾನಸಿಕ-ದೈಹಿಕ ಬೆಳವಣಿಗೆಗೆ ಪೂರಕವಾಗುವಂತೆ, ಈ ಸಂಸ್ಥೆ ಕಳೆದ 20 ವರ್ಷಗಳಿಂದ ನಡೆಸುತ್ತಾ ಬಂದಿರುವುದು ಪಾಲಕರಲ್ಲಿ ಸಂತೋಷವನ್ನುಂಟುಮಾಡಿದೆ.

ಇಷ್ಟೇ ಅಲ್ಲದೇ, ಸಂಸ್ಥೆಯ ಅಡಿಯಲ್ಲಿ ಯೋಗ ಚಿಂತನ ಕೂಟ, ಬಸವ ಯೋಗಕೇಂದ್ರ ಹಾಗೂ ಅಕ್ಕಮಹಾದೇವಿ ಯೋಗವಿಜ್ಞಾನ ಕೇಂದ್ರ, ಶ್ರೀ ಕುಮಾರೇಶ್ವರ ಯೋಗ ಜಿಮ್ ಹೀಗೆ ಮೂರು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಯೋಗ ಚಿಂತನ ಕೂಟದ ಉದ್ದೇಶ ಆತ್ಮಕಲ್ಯಾಣ, ಸಮಾಜ ಕಲ್ಯಾಣದೊಂದಿಗೆ, ನಾಡು-ನುಡಿ ಹಾಗೂ ಆರೋಗ್ಯ ಜಾಗೃತಿ ಅಭಿಯಾನದ ಮೂಲಕ ಸಮಾಜಮುಖಿ ಸ್ವಾಸ್ಥ್ಯ ಕಾಪಾಡುವದಾಗಿದೆ. ಇನ್ನು ಬಸವ ಯೋಗ ಕೇಂದ್ರ ಸಿ.ವಾಯ್. ಎಸ್. ಯೋಗ ಸರ್ಟಿಫಿಕೇಟ್ ಕೋರ್ಸ್ ಹಾಗೂ ಪಿ.ಜಿ.ಡಿಪ್ಲೋಮಾ ಹೀಗೆ



ಎರಡು ಕೋರ್ಸ್‌ಗಳನ್ನು ಕರ್ನಾಟಕ ವಿಶ್ವವಿದ್ಯಾಲಯದ ಅಡಿಯಲ್ಲಿ ನಡೆಸುತ್ತಾ ಬರುತ್ತಿದೆ.

ಈ ಕೋರ್ಸ್‌ಗಳನ್ನು ಪಡೆದ ಹಲವಾರು ಯುವಕರು, ಶಿಕ್ಷಣ ಸಂಸ್ಥೆಗಳಲ್ಲಿ ಹಾಗೂ ಸರಕಾರಿ ಇಲಾಖೆಗಳಲ್ಲಿ ಯೋಗ ಶಿಕ್ಷಕರಾಗಿ, ಯೋಗ ತರಬೇತುದಾರರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇದು ಈ ಸಂಸ್ಥೆಯ ಹಿರಿಮೆ-ಗರಿಮೆಗೆ ನಿದರ್ಶನವಾಗಿದೆ. ಮೂರನೆಯ ಸಂಸ್ಥೆಯಾದ ಮಹಿಳಾ ಯೋಗ ವಿಜ್ಞಾನ ಕೇಂದ್ರದ ಹರವು ವಿಸ್ತಾರವಾದುದು. ಮಹಾಶಿವಶರಣೆ ಅಕ್ಕಮಹಾದೇವಿ ಹೆಸರಿನಲ್ಲಿ ಪ್ರಾರಂಭವಾದ ಈ ಸಂಸ್ಥೆಯು, ಮಹಿಳೆಯರು ದೈಹಿಕ ಹಾಗೂ ಮಾನಸಿಕವಾಗಿ ಆರೋಗ್ಯವಂತರಾಗುವ ಸಲುವಾಗಿ ಯೋಜನೆ ಹಾಕಿಕೊಂಡಿತು. ಅವರಿಗೆ ಶೈಕ್ಷಣಿಕ, ಸಾಮಾಜಿಕ, ಸಾಂಸ್ಕೃತಿಕ ಅರಿವನ್ನು ಮೂಡಿಸುವದು. ವಿಶೇಷ ಸಂದರ್ಭಗಳಲ್ಲಿ ಸಂಗೀತ, ಕರಕುಶಲ ತರಬೇತಿ, ಉಪನ್ಯಾಸ, ಕಾರ್ಯಾಗಾರ, ವಿವಿಧ ಸ್ಪರ್ಧೆಗಳನ್ನು ನಡೆಸುವುದರ ಜೊತೆಗೆ ನಾಡಹಬ್ಬ-ವನಮಹೋತ್ಸವ ಆಚರಿಸುವುದು ಹಾಗೂ ಪ್ರತಿ ರವಿವಾರ 'ಅನ್ವೇಷಣೆ'ಯ ಮೂಲ ಪ್ರಚಲಿತ ವಿಷಯಗಳ ಸಮಸ್ಯೆಗಳ ಕುರಿತಾಗಿ ಚಿಂತನ-ಮಂಥನ ಏರ್ಪಡಿಸುವದು. ಹೀಗಾಗಿ ಈ ಸಂಸ್ಥೆಯು ತಾಯಂದಿರ ಸಂಸ್ಥೆ ಎಂದರೆ ಅತಿಶಯೋಕ್ತಿಯಾಗದು. ಇಷ್ಟೆಲ್ಲಾ ಬೆಳೆಯಲು ಕೆ.ಎಸ್. ಪಲ್ಲೇದ ಹಾಗೂ ಸಮಾನ ಮನಸ್ಕರರಾದ ಎಂ.ಎಸ್. ಶಿರಿಯಣ್ಣವರ, ಡಾ. ಎಂ.ವಿ. ಐಹೊಳ್ಳಿ, ಡಾ. ಎಸ್. ಕೆ. ನಾಲ್ವತ್ತವಾಡಮಠ, ವಿ.ಎಂ. ಮುಂದಿನಮನಿ, ಕೆ.ವಿ. ಗೋಣಿ, ಎಸ್.ಎಸ್. ಪಟ್ಟಣಶೆಟ್ಟಿ, ಎಂ.ಎಸ್. ಅಂಗಡಿ ಹಾಗೂ ಶಾಂತಾ ಕೋನ್ನವರ, ಅನ್ನಪೂರ್ಣ ವರವಿ, ಜಯಶ್ರೀ ವಸ್ತ್ರದ, ವಿಜಯ ಚನ್ನಶೆಟ್ಟಿ, ಜಯಶ್ರೀ ದಾವಣಗೇರಿ, ಸುಲೋಚನಾ ಐಹೊಳ್ಳಿ ಪಾರ್ವತಿ ಭೂಮಾ, ಮಹಾದೇವಿ ಚರಂತಿಮಠ, ವಿಜಯಲಕ್ಷ್ಮೀ ಆನೆಹೊಸೂರ, ಅನ್ನಪೂರ್ಣ ಅಸೂಟಿ ಮುಂತಾದ ತಾಯಂದಿರು ಇವರಿಗೆ ಕೈಜೋಡಿಸುತ್ತಿದ್ದಾರೆ.

ಈಗ 49ನೇ ವರ್ಷದ ವಾರ್ಷಿಕೋತ್ಸವವನ್ನು ವಿಶಿಷ್ಟವಾಗಿ ಆಚರಿಸುವುದು ಮುಂದಿನ ವರ್ಷದ ಸುವರ್ಣ ಮಹೋತ್ಸವಕ್ಕೆ ಮುನ್ನುಡಿಯಾಗಬೇಕೆಂಬುದು ಯೋಗ ಬಂಧುಗಳೆಲ್ಲ ಕರ್ನಾಟಕ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕರು ಹಾಗೂ ಹೆಸರಾಂತ ಚಿಂತಕರಾದ ಡಾ. ಎಸ್.ಟಿ. ನಂದಿಬೇವೂರ ಹಾಗೂ ಇವರ ದರ್ಮದಪತ್ನಿ, ಯೋಗ ಸಾಧಕಿ ಅರುಣಾ ನಂದಿಬೇವೂರ ಇವರನ್ನು ಕರೆಸುತ್ತಿರುವದು ಕಾರ್ಯಕ್ರಮದ ಘಟನತೆಗೆ ಸಾಕ್ಷಿಯಾಗಿದೆ. ಇದೇ ಸಂದರ್ಭದಲ್ಲಿ ಪಿ.ಎಸ್.ಐ. ಹುದ್ದೆಯಿಂದ ಸೇವಾ ನಿವೃತ್ತರಾದ ಸಂಗಮೇಶ ಜಕ್ಕನಗೌಡ್ರ, ಹುಬ್ಬಳ್ಳಿ ಹಾಗೂ ನಿಯೋಜಿತ ಕಟ್ಟಡದ ಆಯ್ದ ದಾನಿಗಳಾದ ಸಾಧಕರಿಗೆ ಸಂಮಾನ ಜರುಗಲಿರುವದು ಮುಕುಟುಪ್ರಾಯವಾಗಿದೆ.

ಈ ಸಂಸ್ಥೆಯ ಮಹಾನ್ ಯೋಜನೆಯಾದ, ಅಂದಾಜು 10 ಕೋಟಿ ರೂ ವೆಚ್ಚದ ಬೃಹತ್ ಯೋಗ ಕೇಂದ್ರವನ್ನು ಯೋಗಾಭಿಮಾನಿಗಳು, ಯೋಗ ಚಿಂತಕರು, ದಾನಿಗಳು, ಗದಗ ಪರಿಸರದ ಅಭಿಮಾನಿಗಳೆಲ್ಲರೂ ತನು-ಮನ-ಧನವನ್ನು ಸಲ್ಲಿಸಿ, ಸಾಮಾಜಿಕ ಆರೋಗ್ಯವನ್ನು ಕಾಪಾಡಬೇಕು, ಸಾಂಸ್ಕೃತಿಕ ವಾತಾವರಣವನ್ನು ಸೃಷ್ಟಿಸಬೇಕೆಂಬುದು ಸಂಚಾಲಕ ಕೆ.ಎಸ್. ಪಲ್ಲೇದ ಶರಣರ ಆಶಯವಾಗಿದೆ.

ಮುಂಬರುವ ಸುವರ್ಣ ಮಹೋತ್ಸವ ಸವಿನೆನಪಿಗಾಗಿ ಸುಸಜ್ಜಿತ ಯೋಗ ಮಹಾವಿದ್ಯಾಲಯ ಕಟ್ಟಡ ನಿರ್ಮಾಣಕ್ಕಾಗಿ ಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರು ಶ್ರೀಮಠದಿಂದ ನೀಡಿದ 2 ಎಕರೆ ಜಮೀನಿನಲ್ಲಿ ನಿರ್ಮಾಣಕಾರ್ಯ ಪ್ರಾರಂಭವಾಗಲಿದೆ. ಕಾರ್ಯದ ಯಶಸ್ಸಿಗೆ ಎಲ್ಲರೂ ಸಹಾಯ-ಸಹಕಾರಗಳನ್ನು ನೀಡಿ ರಾಷ್ಟ್ರದ ಪ್ರಗತಿಗೆ ಸಹಕರಿಸಬೇಕಿದೆ.

**-ಶಿವನಗೌಡ ಗೌಡರ.**
**ನಿವೃತ್ತ ಮುಖೋಪಾಧ್ಯಾಯರು,**
**ಗದಗ.**

## ಚುನಾವಣಾ ಪ್ರಚಾರದ ವೇಳೆ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ಕನ್ವಯ್ಯಾ ಕುಮಾರ್ ಮೇಲೆ ಹಲ್ಲೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಈಶಾನ್ಯ ದೆಹಲಿ ಲೋಕಸಭೆ ಕ್ಷೇತ್ರದ ಕಾಂಗ್ರೆಸ್‌ನ ಅಭ್ಯರ್ಥಿ ಕನ್ವಯ್ಯಾ ಕುಮಾರ್ ಅವರಿಗೆ ಚುನಾವಣಾ ಪ್ರಚಾರದ ವೇಳೆ ಹಲ್ಲೆ ನಡೆಸಿರುವ ಘಟನೆ ನಡೆದಿದೆ.

ಚುನಾವಣಾ ಪ್ರಚಾರದ ವೇಳೆ ಹೂಮಾಲೆ ಹಾಕುವ ನೆಪದಲ್ಲಿ ಅವರ ಬಳಿಗೆ ಬಂದ ಕೆಲವರು ಬಳಿಕ ಅವರಿಗೆ ಥಳಿಸಿದ್ದಾರೆ. ಘಟನೆಯ ವಿಡಿಯೋ ವೈರಲ್ ಆಗಿದೆ. ಇದೇ ವೇಳೆ ದುಷ್ಕರ್ಮಿಗಳು ಆಮ್ ಆದ್ಮಿ ಪಕ್ಷದ ಮಹಿಳಾ ಕೌನ್ಸಿಲರ್ ಛಾಯಾ ಗೌರವ್ ಶರ್ಮ ಅವರೊಂದಿಗೂ ಅನುಚಿತವಾಗಿ ವರ್ತಿಸಿರುವ ಆರೋಪ ಕೇಳಿ ಬಂದಿದೆ.



ತನ್ನ ಶಾಲನ್ನು ಕಿತ್ತುಕೊಂಡು, ಪತಿಯನ್ನು ಪಕ್ಕಕ್ಕೆ ಕರೆದೊಯ್ದು ಬೆದರಿಕೆ ಹಾಕಿದ್ದಾರೆ. ಇದಲ್ಲದೆ ಗುಂಪಿನ ಮೇಲೆ ಕಪ್ಪು ಶಾಹಿ ಎರಚಲಾಗಿದ್ದು, ಕೆಲ ಮಹಿಳೆಯರು ಈ ವೇಳೆ ಗಾಯಗೊಂಡಿದ್ದಾರೆ ಎಂದು ಗೌರವ್ ಶರ್ಮ ಪೊಲೀಸರಿಗೆ ನೀಡಿದ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಪೊಲೀಸರ ಪ್ರಕಾರ, ಕೌನ್ಸಿಲರ್ ಛಾಯಾ ಶರ್ಮಾ ಅವರೊಂದಿಗಿನ ಸಭೆಯ ನಂತರ ಕನ್ವಯ್ಯಾ ಕುಮಾರ್ ಕರ್ತಾರ್ ನಗರದಲ್ಲಿರುವ ಎಎಪಿ ಕಚೇರಿಯಿಂದ ಹೊರಗೆ ಬಂದಾಗ ಕೆಲವು ವ್ಯಕ್ತಿಗಳು ಕನ್ವಯ್ಯಾ ಕುಮಾರ್‌ಗೆ ಹೂಮಾಲೆ ಹಾಕುವ ನೆಪದಲ್ಲಿ ಸಮೀಪಕ್ಕೆ ಬಂದು ಹಾರವನ್ನು ಹಾಕಿದ್ದಾರೆ. ಬಳಿಕ ಕನ್ವಯ್ಯಾ ಕುಮಾರ್ ಮೇಲೆ ಶಾಯಿ ಎರಚಿ ಹಲ್ಲೆ ನಡೆಸಿದ್ದಾರೆ. ಛಾಯಾ ಶರ್ಮಾ ಅವರು ಮಧ್ಯಪ್ರವೇಶಿಸಲು ಪ್ರಯತ್ನಿಸಿದಾಗ, ಅವರು ಅನುಚಿತವಾಗಿ ವರ್ತಿಸಿದರು ಮತ್ತು ಬೆದರಿಕೆ ಹಾಕಿದರು ಎಂದು ಈಶಾನ್ಯ ಉಪ ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಘಟನೆಯ ನಂತರ, ದಾಳಿಯ ಹೊಣೆಯನ್ನು ಹೊತ್ತು ಕೊಂಡು ಇಬ್ಬರು ದುಷ್ಕರ್ಮಿಗಳು ವೀಡಿಯೊವನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ.

ಕನ್ವಯ್ಯಾ ಕುಮಾರ್ ದೇಶವನ್ನು ವಿಭಜಿಸುವ ಬಗ್ಗೆ ಮಾತನಾಡುತ್ತಾರೆ, ಭಾರತೀಯ ಸೇನೆಯ ವಿರುದ್ಧ ಮಾತನಾಡುತ್ತಾರೆ ಮತ್ತು ಇಂದು ನಾವು ಅವರಿಗೆ ಸರಿಯಾಗಿ ಚಿಕಿತ್ಸೆ ನೀಡಿದ್ದೇವೆ ಎಂದು ವೀಡಿಯೊದಲ್ಲಿ ಹೇಳಲಾಗಿದೆ. ದೇಶವನ್ನು ವಿಭಜಿಸುವ ಬಗ್ಗೆ ಮಾತನಾಡುವವರಿಗೆ ದೆಹಲಿ ಪ್ರವೇಶಿಸಲು ನಾವು ಅವಕಾಶ ನೀಡುವುದಿಲ್ಲ ಎಂದು ವಿಡಿಯೋದಲ್ಲಿರುವ ವ್ಯಕ್ತಿಯೊಬ್ಬರು ಪ್ರತಿಪಾದಿಸಿದ್ದಾರೆ.

ಆದರೆ ಈ ಕುರಿತ ವಿಡಿಯೋದ ಅಸಲಿಯತ್ತನ್ನು ತಕ್ಷಣಕ್ಕೆ ಪರಿಶೀಲನೆ ನಡೆಸಲಾಗಿಲ್ಲ ಎಂದು ತಿಳಿದು ಬಂದಿದೆ.

ಈಶಾನ್ಯ ದೆಹಲಿಯಲ್ಲಿ ಬಿಜೆಪಿಯ ಮನೋಜ್ ತಿವಾರಿ ವಿರುದ್ಧ ಇಂಡಿಯಾ ಬ್ಲಾಕ್ ಅಭ್ಯರ್ಥಿಯಾಗಿ ಕನ್ವಯ್ಯ ಕುಮಾರ್ ಸ್ಪರ್ಧೆಯಲ್ಲಿದ್ದಾರೆ. ತನ್ನ ವಿರುದ್ಧದ ದಾಳಿಗೆ ಮನೋಜ್ ತಿವಾರಿಯನ್ನು ಕನ್ವಯ್ಯ ಕುಮಾರ್ ಹೊಣೆಯಾಗಿಸಿದ್ದಾರೆ.

ಸಂಸದ ತಿವಾರಿ ಅವರು ನನಗೆ ಹೆಚ್ಚಿನ ಜನಬೆಂಬಲ ಸಿಗುತ್ತಿರುವ ಹಿನ್ನೆಲೆ ಹತಾಶರಾಗಿದ್ದಾರೆ. ಅದಕ್ಕಾಗಿಯೇ ಅವರು ತಮ್ಮ ಮೇಲೆ ದಾಳಿ ಮಾಡಲು ಗೂಂಡಾಗಳನ್ನು ಕಳುಹಿಸಿದ್ದಾರೆ. ಮೇ 25ರಂದು ಮತದಾನದ ಮೂಲಕ ಸಾರ್ವಜನಿಕರು ಹಿಂಸಾಚಾರಕ್ಕೆ ತಕ್ಕ ಉತ್ತರವನ್ನು ನೀಡಲಿದ್ದಾರೆ ಎಂದು ಕನ್ವಯ್ಯ ಕುಮಾರ್ ಹೇಳಿದ್ದಾರೆ.

## ಬಿಜೆಪಿ ಸರ್ಕಾರದ ಯೋಜನೆಯಲ್ಲಿ 1,140 ಕೋಟಿ ರೂ.ನಷ್ಟ: ತಮ್ಮದೇ ಸರಕಾರದ ವಿರುದ್ಧ ಆರೋಪಿಸಿದ ಸಚಿವ

■ವಿಜಯಸಾಕ್ಷಿ ಸುದ್ದಿ, ರಾಜಸ್ಥಾನ



ರಾಜಸ್ಥಾನದ ಬಿಜೆಪಿ ಸರಕಾರ ಅಧಿಕಾರಕ್ಕೇರಿದ ಆರು ತಿಂಗಳಲ್ಲೇ ಬಿಕ್ಕಟ್ಟನ್ನು ಎದುರಿಸುತ್ತಿದ್ದು, ಮುಖ್ಯಮಂತ್ರಿಯ ಅಧೀನದ ಇಲಾಖೆಯಲ್ಲಿನ ವಸತಿ ಯೋಜನೆಯಲ್ಲಿನ ಲೋಪದೋಷವನ್ನು ಕ್ಯಾಬಿನೆಟ್ ಸಚಿವರೋರ್ವರು ಬಹಿರಂಗಪಡಿಸಿದ್ದು, ಇದರಿಂದ ಸರಕಾರದ ಬೊಕ್ಕಸಕ್ಕೆ 1,146 ಕೋಟಿ ರೂ. ನಷ್ಟವಾಗಿದೆ ಎಂದು ತಿಳಿಸಿದ್ದಾರೆ.

ಭಜನ್ ಲಾಲ್ ಶರ್ಮಾ ನೇತೃತ್ವದ ಬಿಜೆಪಿ ಸರಕಾರ ರಾಜಸ್ಥಾನದಲ್ಲಿ ಅಧಿಕಾರದಲ್ಲಿದೆ.

ಹಿರಿಯ ನ್ಯಾಯಾಧೀಶರು ಮತ್ತು ಐಎಎಸ್ ಅಧಿಕಾರಿಗಳ ನಿವಾಸಗಳಿಗೆ ಜೈಪುರದ ಗಾಂಧಿನಗರದಲ್ಲಿ ವಸತಿ ಸಂಕೀರ್ಣ ಯೋಜನೆಯಿಂದ ರಾಜ್ಯ ಸರಕಾರದ ಬೊಕ್ಕಸಕ್ಕೆ 1,146 ಕೋಟಿ ನಷ್ಟವುಂಟಾಗಲಿದೆಯೆಂದು ಹಿರಿಯ ಬಿಜೆಪಿ ನಾಯಕ ಹಾಗೂ ಕೃಷಿ ಸಚಿವ ಕಿರೋಡಿ ಲಾಲ್ ಮೀನಾ ಆಪಾದಿಸಿದ್ದಾರೆ. ಮುಖ್ಯಮಂತ್ರಿಯವರ ಅಧೀನದಲ್ಲಿರುವ ಸಾಮಾನ್ಯ ಆಡಳಿತ ಇಲಾಖೆ (ಜಿಎಡಿ) ಕ್ಯಾಬಿನೆಟ್ ಅನುಮತಿಯಿಲ್ಲದೆ ಯೋಜನೆಯನ್ನು ಮುಂದುವರಿಸುತ್ತಿದೆ ಎಂದು ಮೀನಾ ಹೇಳಿದ್ದು, ಯೋಜನೆಗೆ ತಡೆ ನೀಡಬೇಕು ಮತ್ತು ಈ ಕುರಿತ ಫೈಲ್‌ನ್ನು ವಾಪಾಸ್ಸು ತರಿಸುವಂತೆ ಸಿಎಂಗೆ ಆಗ್ರಹಿಸಿದ್ದಾರೆ.

ಸಾಮಾನ್ಯ ಆಡಳಿತ ಇಲಾಖೆ ಗಾಂಧಿನಗರದಲ್ಲಿರುವ ಹಳೆಯ ಎಂಆರ್‌ಇಸಿ ಕ್ಯಾಂಪಸ್ ಕಟ್ಟಡಗಳನ್ನು ನಾಶಪಡಿಸಿ ಬಹುಮಹಡಿ ಕಟ್ಟಡಗಳನ್ನು ನಿರ್ಮಿಸುವ ಯೋಜನೆಯನ್ನು ಹೊಂದಿದೆ. ಐದು ವರ್ಷಗಳ ಹಿಂದೆ ಈ ನಿವೇಶನದ ಮೌಲ್ಯವು ರೂ.277 ಕೋಟಿಗಳಾಗಿದ್ದರೂ, ಈಗ ಅದರ ಮೌಲ್ಯವನ್ನು ಕಡಿಮೆಗೊಳಿಸಿ 218 ಕೋಟಿ ರೂ. ಎಂದು ಹೇಳಲಾಗಿದೆ. ಜಮೀನಿನ ಮೀಸಲು ಬೆಲೆಯು ಪ್ರಸಕ್ತ 25 ಸಾವಿರ ರೂ.ಗಳಾಗಿದ್ದರೂ, ಅದನ್ನು 8 ಸಾವಿರ ಚದರ ಅಡಿಗೆ ನೀಡಲಾಗಿದೆ. ಇದರಿಂದಾಗಿ ರಾಜ್ಯ ಸರಕಾರಕ್ಕೆ ಪ್ರತಿ ಚದರ ಅಡಿಗೆ 17 ಸಾವಿರ ರೂ.ನಷ್ಟವಾಗಲಿದೆ. ಈ ವಸತಿ ಸಂಕೀರ್ಣ ಯೋಜನೆಯಡಿ ರಾಜ್ಯ ಸರಕಾರವು ಮೂರನೇ ಒಂದರಷ್ಟು ಫ್ಲಾಟ್‌ಗಳನ್ನು ಸಾರ್ವಜನಿಕ-ಖಾಸಗಿ ಪಾಲುದಾರಿಕೆಯಡಿ ಖಾಸಗಿಯವರಿಗೆ ನೀಡಲಿದೆ ಎಂದು ಮೀನಾ ತಿಳಿಸಿದ್ದಾರೆ. ಇದರಿಂದ ರಾಜ್ಯದ ಬೊಕ್ಕಸಕ್ಕೆ 1,146 ಕೋಟಿ ರೂ. ನಷ್ಟವುಂಟಾಗಲಿದೆ ಎಂದು ಮೀನಾ ಹೇಳಿದ್ದಾರೆ. ಯೋಜನೆಯ ಕಡತವನ್ನು ಕ್ಯಾಬಿನೆಟ್ ಅಥವಾ ಹಣಕಾಸು ಸಚಿವಾಲಯ ಪಾಸ್ ಮಾಡಿಲ್ಲ ಎಂದು ಹೇಳಿರುವ ಸಚಿವರು, ಅದನ್ನು ತಕ್ಷಣ ಹಿಂಪಡೆಯುವಂತೆ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಅವರನ್ನು ಒತ್ತಾಯಿಸಿದ್ದಾರೆ.

ಹಿರಿಯ ಸಚಿವರಾಗಿರುವ ಕಿರೋಡಿ ಲಾಲ್ ಮೀನಾ ತಮ್ಮದೇ ಸರ್ಕಾರ ತೆಗೆದುಕೊಳ್ಳುತ್ತಿರುವ ನಿರ್ಧಾರಗಳನ್ನು ವಿರೋಧಿಸುತ್ತಿರುವುದು ಇದೇ ಮೊದಲಲ್ಲ. ಕಳೆದ ತಿಂಗಳು, ಅವರು ಪೂರ್ವ ರಾಜಸ್ಥಾನ ಕಾಲುವೆ ಯೋಜನೆಯಡಿಯಲ್ಲಿ ಭೂಮಿಯನ್ನು ಮಾರಾಟ ಮಾಡುವ ಬಗ್ಗೆ ಕಳವಳ ವ್ಯಕ್ತಪಡಿಸಿದ್ದರು ಮತ್ತು ಭ್ರಷ್ಟಾಚಾರದ ಸುಳಿವು ನೀಡಿದ್ದರು.

ವಿಧಾನಸಭಾ ಚುನಾವಣೆಗೆ ಸ್ಪರ್ಧಿಸುವ ಮೊದಲು ಕಿರೋಡಿ ಲಾಲ್ ಮೀನಾ ಮೀನಾ ರಾಜ್ಯಸಭಾ ಸದಸ್ಯರಾಗಿದ್ದರು ಮತ್ತು ಚುನಾವಣಾ ಪ್ರಚಾರದಲ್ಲಿ ದೊಡ್ಡ ಪಾತ್ರವನ್ನು ವಹಿಸಿದ್ದರು. ಕಳೆದ ವರ್ಷ ಅಶೋಕ್ ಗೆಹ್ಲೋಟ್ ನೇತೃತ್ವದ ಕಾಂಗ್ರೆಸ್ ಸರ್ಕಾರದ ಪತನದ ಬಳಿಕ ಬಿಜೆಪಿಯು ಶಾಸಕ ಭಜನ್ ಲಾಲ್ ಶರ್ಮಾ ಅವರನ್ನು ಮುಖ್ಯಮಂತ್ರಿ ಮಾಡುವ ಮೂಲಕ ಅಚ್ಚರಿಯ ನಿರ್ಧಾರವನ್ನು ಪ್ರಕಟಿಸಿತ್ತು.

ಮೀನಾ ಅವರು ತಮಗೆ ನೀಡಲಾದ ಖಾತೆಗಳ ಬಗ್ಗೆ ಅತೃಪ್ತರಾಗಿದ್ದಾರೆ ಮತ್ತು ದೌಸಾ ಲೋಕಸಭಾ ಕ್ಷೇತ್ರದಿಂದ ತಮ್ಮ ಸಹೋದರನಿಗೆ ಟಿಕೆಟ್ ನೀಡಲು ಪ್ರಯತ್ನಿಸುತ್ತಿದ್ದರು ಎನ್ನಲಾಗಿದೆ. 2019ರ ಲೋಕಸಭೆ ಚುನಾವಣೆಯಲ್ಲಿ ರಾಜಸ್ಥಾನದಲ್ಲಿ ಬಿಜೆಪಿ 25ರಲ್ಲಿ 24 ಸ್ಥಾನಗಳನ್ನು ಗೆದ್ದಿತ್ತು. ಇದು 2014ರಲ್ಲಿ ಎಲ್ಲಾ 25 ಸ್ಥಾನಗಳನ್ನು ಗೆದ್ದಿತ್ತು. ಈ ಎರಡೂ ಚುನಾವಣೆಗಳು ವಸುಂಧರಾ ರಾಜೆ ನೇತೃತ್ವದಲ್ಲಿ ನಡೆದಿದ್ದವು. ಈ ವರ್ಷದ ಲೋಕಸಭೆ ಚುನಾವಣೆಯನ್ನು ಹೊಸ ಆಡಳಿತಕ್ಕೆ ಅಗ್ನಿಪರೀಕ್ಷೆ ಎಂದು ಪರಿಗಣಿಸಲಾಗಿದೆ ಮತ್ತು ಬಿಜೆಪಿಯ ಸ್ಥಾನಗಳು ಕಡಿಮೆಯಾದರೆ, ಶರ್ಮಾ ಅವರು ತಮ್ಮ ಸರ್ಕಾರ ಮತ್ತು ಪಕ್ಷದೊಳಗಿನ ಬಣಗಳನ್ನು ಎದುರಿಸುವ ಪರಿಸ್ಥಿತಿ ಎದುರಾಗಬಹುದು ಎಂದು ಹೇಳಲಾಗಿದೆ.

## ಶ್ರೀ ಶಂಕರಾಚಾರ್ಯ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಲ್ಲಿನ ಬ್ರಾಹ್ಮಣ ಸಂಘದ ವತಿಯಿಂದ ಜಗದ್ಗುರು ಶ್ರೀ ಶಂಕರಾ ಚಾರ್ಯ ಜಯಂತಿಯನ್ನು ಬಿತ್ತೀಚೆಗೆ ಮುಳಗುಂದದ ನಗರೇಶ್ವರ ದೇವಸ್ಥಾ ನದಲ್ಲಿ ಬಹುವಿಜೃಂಬಣೆಯಿಂದ ಆಚರಿಸಲಾಯಿತು. ಕಾರ್ಯಕ್ರಮದ ನೇತೃತ್ವವನ್ನು ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ವಹಿಸಿದ್ದರು.



ಇದೇಸಂದರ್ಭದಲ್ಲಿ ಬ್ರಾಹ್ಮಣ ಸಂಘದ ಶಾಖಾ ಘಟಕದ ಅಧ್ಯಕ್ಷರಾಗಿ ಗೋವಿಂದರಾವ್ ಇಂಗಳಗಿ ಹಾಗೂ ಉಪಾಧ್ಯಕ್ಷರಾಗಿ ಶ್ರೀಪಾದನಾಯ್ಕ ಶಂ.ತಮ್ಮಣ್ಣವರ ಇವರನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರನ್ನಾಗಿ ಸುಮತಿ ಗುಡಿ, ಉಪಾಧ್ಯಕ್ಷರನ್ನಾಗಿ ಲತಾ ಪ್ರ. ಡಂಬಳ, ಕಾರ್ಯದರ್ಶಿಯನ್ನಾಗಿ ಭಾಗ್ಯಲಕ್ಷ್ಮೀ ಗೋ. ಇಂಗಳಗಿ, ಖಜಾಂಚಿಯಾಗಿ ವಿದ್ಯಾ ಕುರಂದವಾಡ ಇವರನ್ನು ಆಯ್ಕೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗೋಪಾಲ ಪ್ರಮೋದ ಡಂಬಳ, ಘಟಕದ ಪದಾಧಿಕಾರಿಗಳು, ಗದಗ ಜಿಲ್ಲಾ ವಿಪ್ರ ಮಹಿಳಾ ಘಟಕದ ಅಧ್ಯಕ್ಷರಾದ ಕಲಾವತಿ ಅಲಬೂರ, ಮಹಿಳಾ ಘಟಕದ ಪದಾದಿ,ಕಾರಿಗಳು ಹಾಜರಿದ್ದರು.

## ಚುನಾವಣಾ ಆಯೋಗ ನವೀಕರಿಸಿದ ಅಂಕಿ ಅಂಶ: 4 ಹಂತಗಳಲ್ಲಿ 1.07 ಕೋಟಿ ಮತಗಳಲ್ಲಿ ವ್ಯತ್ಯಾಸ!

■ವಿಜಯಸಾಕ್ಷಿ ಸುದ್ದಿ, ಮುಳಗುಂದ

2024ರ ಲೋಕಸಭಾ ಚುನಾವಣೆಯ ಮೊದಲ ನಾಲ್ಕು ಹಂತಗಳ ಮತದಾನದ ಪ್ರತಿ ರಾತ್ರಿ ಚುನಾವಣಾ ಆಯೋಗ ನೀಡಿದ ಮತದಾನದ ಅಂಕಿ-ಅಂಶಗಳನ್ನು ವಿಶ್ಲೇಷಣೆ ಮಾಡಿದಾಗ ಮೊದಲ ನಾಲ್ಕು ಹಂತಗಳಲ್ಲಿ ಸುಮಾರು 1.07 ಕೋಟಿ ಮತಗಳ ವ್ಯತ್ಯಾಸವನ್ನು ತೋರಿಸುತ್ತವೆ. ಅಂದರೆ ಮತದಾನ ಮುಗಿದ 379 ಕ್ಷೇತ್ರಗಳಲ್ಲಿ ಸರಾಸರಿ 28,000 ಮತಗಳ ವ್ಯತ್ಯಾಸವನ್ನು ತೋರಿಸುತ್ತದೆ.

ಪ್ರತಿ ಹಂತದ ಮತದಾನ ದಿನದಂದು ರಾತ್ರಿ 10.30ರಿಂದ 11.30ರ ನಡುವೆ ಅಂಕಿಅಂಶಗಳನ್ನು ಅಪ್‌ಡೇಟ್ ಮಾಡಲಾಗುತ್ತದೆ. ಚು.ಆಯೋಗ ಬಿಡುಗಡೆಗೊಳಿಸಿರುವ ಅಂತಿಮ ಅಂಕಿ ಅಂಶಗಳು ಪೋಸ್ಟಲ್ ಮತಗಳನ್ನು ಒಳಗೊಂಡಿಲ್ಲ ಹಾಗೂ ಇದು ಅಂದಾಜು ಟ್ರೆಂಡ್‌ಗಳು ಎಂದು ಚುನಾವಣಾ ಆಯೋಗ ಹೇಳುತ್ತಿದೆ. ಮೊದಲ ಹಂತದ ಮತದಾನ ನಡೆದ 11 ದಿನಗಳ ನಂತರ ಮತದಾನದ ಬಗ್ಗೆ ಮಾಹಿತಿ ನೀಡಲಾಗಿದೆ ಮತ್ತ 2, 3 ಮತ್ತು 4ನೇ ಹಂತದ ಚುನಾವಣೆಯ ನಾಲ್ಕು ದಿನಗಳ ನಂತರ ಈ ಪ್ರಕ್ರಿಯೆ ನಡೆದಿದೆ.

ಅಂತಿಮ ಅಂಕಿಅಂಶಗಳು ಮತದಾನದ ದಿನದಂದು ಬಹಿರಂಗಗೊಳಿಸಿದ ಅಂಕಿಅಂಶಗಳಿಗಿಂತ ಭಿನ್ನವಾಗಿವೆ. ಹಲವಾರು ರಾಜ್ಯಗಳಲ್ಲಿನ ಅಂಕಿ-ಅಂಶಗಳಲ್ಲಿ ವ್ಯತ್ಯಾಸ ಕಂಡು ಬಂದಿದೆ. ಮೊದಲ ಹಂತದ ಚುನಾವಣೆಯಲ್ಲಿ 18.6 ಲಕ್ಷ ಮತಗಳು, ಎರಡನೇ ಹಂತದಲ್ಲಿ 32.2 ಲಕ್ಷ ಮತಗಳು, ಮೂರನೇ ಹಂತದಲ್ಲಿ 22.1 ಲಕ್ಷ ಹಾಗೂ ನಾಲ್ಕನೇ ಹಂತದಲ್ಲಿ 33.9 ಲಕ್ಷ ಮತಗಳು ಹೀಗೆ ಒಟ್ಟು 1.07 ಕೋಟಿ ಮತಗಳಲ್ಲಿ ವ್ಯತ್ಯಾಸ ಕಂಡು ಬಂದಿದೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ವ್ಯಕ್ತಿತ್ವ ರೂಪಿಸಲು ವಚನಗಳು ಅವಶ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶಿವಶರಣರ ವಚನಗಳನ್ನು ಹೆಚ್ಚು ಹೆಚ್ಚು ಓದಿದಾಗ, ಅರ್ಥೈಸಿಕೊಂಡಾಗ, ಆ ವಿಚಾರಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಪ್ರಗತಿಪಥದತ್ತ ಸಾಗುತ್ತೇವೆ. ಮನುಷ್ಯನ ವ್ಯಕ್ತಿತ್ವ ರೂಪಿಸಲು ಬಸವಾದಿ ಶರಣರ ವಚನಗಳು ಬಹಳ ಅವಶ್ಯ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2693ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಪ್ರಜಾಪ್ರಭುತ್ವ ಯುಗದಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಪ್ರತಿಪಾದಿಸುವದಕ್ಕೆ ಹಿಂದೇಟು ಹಾಕುತ್ತಿದ್ದೇವೆ. 12ನೇ ಶತಮಾನದಲ್ಲಿ ಬಸವಣ್ಣನವರು ಪ್ರಭುತ್ವದ ಕಾಲದಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಜನರಿಗೆ ತಿಳಿಸಿಕೊಡುತ್ತಿದ್ದರು. ಸಮಾಜದಲ್ಲಿ ಸಮಾನತೆಗಾಗಿ, ರಾಷ್ಟ್ರವನ್ನು ಸಮೃದ್ಧವಾಗಿ ಬೆಳೆಸುವದಕ್ಕಾಗಿ, ಜನರು ಸಂತೃಪ್ತಿಯಿಂದ ಬಾಳುವುದಕ್ಕಾಗಿ ಬೇಕಾಗಿರುವ ಮೌಲ್ಯಗಳನ್ನು ಬಸವಣ್ಣನವರು ನೀಡಿದ್ದಾರೆ. 12ನೇ ಶತಮಾನದಲ್ಲಿ ನಡೆಸಿದ ಸಮಾಜೋಧಾರ್ಮಿಕ ಚಳುವಳಿ ಜಾಗತಿ-ಕ ಇತಿಹಾಸದಲ್ಲಿಯೇ ಮಹತ್ವಪೂರ್ಣವಾದ ಚಳುವಳಿಯಾಗಿದೆ. ಹೆಣ್ಣುಮಕ್ಕಳನ್ನು ಗೌರವಿಸಿ, ವಿಶೇಷ ಸ್ಥಾನಮಾನವನ್ನು ಕಲ್ಪಿಸಿ ಧಾರ್ಮಿಕ ಸ್ವಾತಂತ್ರ್ಯವನ್ನು ನೀಡಿದವರು ಬಸವಣ್ಣನವರು ಎಂದರು.



ಕೊಪ್ಪಳದ ಪ್ರಗತಿಪರ ಚಿಂತಕ ಪ್ರೊ. ಅಲ್ಲಮಪ್ರಭು ಬೆಟ್ಟದೂರು ಉಪನ್ಯಾಸ ನೀಡಿ, ಭಾರತ ಬಹುಸಂಸ್ಕೃತಿ, ಬಹುಧರ್ಮಗಳ, ಬಹುಭಾಷೆಗಳ, ಬಹು ಆಹಾರ ಪದ್ಧತಿಗಳ, ಬಹು ವಸ್ತ್ರಪದ್ಧತಿಗಳ ದೇಶ. ಈ ಮೇಲು-ಕೀಳು ಭಾವನೆಗಳು ಹೋಗಬೇಕಾದರೆ ಪ್ರತಿಯೊಬ್ಬರು ಸತ್ಯಶುದ್ಧ ಕಾಯಕ ಮಾಡಬೇಕು. ಕಾಯಕದಿಂದ ಗಳಿಸಿ ಉಳಿತಾಯವಾದ ಹೆಚ್ಚಿನ ಹಣವನ್ನು ಸಮಾಜಕ್ಕೆ ಉಪಯೋಗಿಸಬೇಕು ಎಂದು ಬಸವಣ್ಣನವರು ಹೇಳಿದ್ದಾರೆ. ಇದನ್ನೇ ದಾಸೋಹ ಎಂದು ಕರೆದರು. ಹೆಚ್ಚುವರಿ ದ್ರವ್ಯ, ಹಣ ವ್ಯಕ್ತಿಯನ್ನು ನಾಶ ಮಾಡುತ್ತದೆ. ನಮ್ಮ ನಮ್ಮ ಧಾರ್ಮಿಕ ವಿಚಾರಗಳನ್ನು ಇಟ್ಟುಕೊಂಡು, ಅನ್ಯಧರ್ಮದ ಜೊತೆಗೆ ಸೌಹಾರ್ದಯುತ ಸಂಬಂಧವನ್ನು ಇಟ್ಟುಕೊಳ್ಳಬೇಕು. ಜನ ಪ್ರಗತಿಯ ಕಡೆಗೆ ಸಾಗಬೇಕು ಎಂದರು.

ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಕಾಡೆಮಿಕ್ ಕೌನ್ಸಿಲ್ ಸದಸ್ಯರಾದ ನಿಮಿತ್ತ ಹುಬ್ಬಳ್ಳಿಯ ಸನಾ ನರ್ಸಿಂಗ್ ಮಹಾವಿದ್ಯಾಲಯದ ಪ್ರಾಂಶುಪಾಲ ಮಹೇಶ ಗದಗ, ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ನಿಮಿತ್ತ ಸಮೃದ್ಧಿ ಶ್ರೀಧರ ಸಿದ್ಲಿಂಗ್ ಅವರನ್ನು ಪೂಜ್ಯರು ಸಂಮಾನಿಸಿದರು.

ಮುಖ್ಯ ಅತಿಥಿಗಳಾಗಿ ಸಾಮಾಜಿಕ ಕಾರ್ಯಕರ್ತ ಅಶ್ರಫ್‌ಅಲಿ ಬಸೀರ್ ಅಹ್ಮದ್ ಭಾಗವಹಿಸಿದ್ದರು.

ಮೃತ್ಯುಂಜಯ ಹಿರೇಮಠ ಮತ್ತು ಗುರುನಾಥ ಸುತಾರ ತಂಡದವರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಹರ್ಷಿತ ಶಿವಾನಂದ ಪಟ್ಟಣಶೆಟ್ಟಿ, ವಚನ ಚಿಂತನೆಯನ್ನು ಶಿವನಾಗರಾಜ ಅಶೋಕ ಆಸಂಗಿ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಹೆಸರಾಂತ ಆಯುರ್ವೇದ ವೈದ್ಯ, ವಿಶ್ರಾಂತ ಪ್ರಾಚಾರ್ಯ ಡಾ. ಯು.ವಿ. ಪುರದ ಹಾಗೂ ಪರಿವಾರದವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

## ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಪಟ್ಟಣದ ಶ್ರೀ ಸೋಮೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಶುಕ್ರವಾರದಿಂದ ವಿಧಿವತ್ತಾಗಿ ಪ್ರಾರಂಭವಾಗಿದ್ದು, ಶುಕ್ರವಾರ ಸಂಜೆ ರಥಕ್ಕೆ ಪೂಜೆ ಸಲ್ಲಿಸಿ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ ನೆರವೇರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಅಪಾರ ಸಂಖ್ಯೆಯ ಮಹಿಳೆಯರು ಉಡಿ ತುಂಬಿಸಿಕೊಂಡು ಇಷ್ಟಾರ್ಥ ಸಿದ್ಧಿಗೆ ಭಕ್ತಿಯಿಂದ ಪ್ರಾರ್ಥಿಸಿದರು. ಶ್ರೀ ಸೋಮೇಶ್ವರ ಜಾತ್ರಾ ಕಮಿಟಿ, ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಮತ್ತು ಅರ್ಚಕರ ಸೇವಾ ಸಮಿತಿಗಳ ಸಹಯೋಗದಲ್ಲಿ ಕಾರ್ಯಕ್ರಮಗಳು ನಡೆಯುತ್ತಿವೆ.

ಶುಕ್ರವಾರ ಸಂಜೆ ರಥದ ಮುಂದೆ ನಡೆದ ಕಾರ್ಯಕ್ರಮದಲ್ಲಿ ವೇ.ಮೂ. ಶಿವಲಿಂಗಯ್ಯ ಹಾಲೇವಾಡಿಮಠ ಉಡಿ ತುಂಬುವ ಕಾರ್ಯಕ್ರಮದ ಸಂಪ್ರದಾಯ ನೆರವೇರಿಸಿದರು. ಈ ಸಂದರ್ಭದಲ್ಲಿ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದ ಮಹತ್ವ ಮತ್ತು ಜಾತ್ರಾ ಮಹೋತ್ಸವ ನಡೆದು ಬಂದ ದಾರಿ ಇತ್ಯದಿಗಳನ್ನು ವಿವರಿಸಿದರು.

ಆಗಮಿಸಿದ್ದ ಸಾವಿರಾರು ಜನರಿಗೆ ಅನ್ನಪ್ರಸಾದದ ವ್ಯವಸ್ಥೆಯನ್ನು ಕಮಿಟಿಯವರು ನಿರ್ವಹಿಸಿದರು. ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಜಾತ್ರಾ ಕಮಿಟಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ, ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಅರ್ಚಕ ಸಮಿತಿ ಅಧ್ಯಕ್ಷ ವಿ.ಎಲ್. ಪೂಜಾರ, ಸುನೀಲ ಮಹಾಂತಶೆಟ್ಟರ, ಸಿದ್ದನಗೌಡ ಬಳ್ಳೊಳ್ಳಿ, ಸುರೇಶ ರಾಚನಾಯ್ಕರ್, ಚನ್ನಪ್ಪ ಜಗಲಿ, ಅಶ್ವಿನಿ ಅಂಕಲಕೋಟಿ, ಸುಮಾ ಚೋಟಗಲ್, ನಿಂಗಪ್ಪ ಬನ್ನಿ, ವಿರುಪಾಕ್ಷ ಆದಿ, ಸೋಮಣ್ಣ ಮುಳಗುಂದ, ಬಸವರಾಜ ಮೆಣಸಿನಕಾಯಿ, ಮಯೂರಗೌಡ ಪಾಟೀಲ, ಪ್ರಕಾಶ ಮುಳಗುಂದ, ಜಿ.ಎಸ್. ಗುಡಗೇರಿ, ರಾಮಣ್ಣ ಗೌರಿ, ನಂದೀಶ ಬಂಡಿವಾಡ, ಶಿವಯೋಗಿ ಅಂಕಲಕೋಟಿ, ಜಯಪ್ರಕಾಶ ಹೊಟ್ಟಿ, ಸೋಮಶೇಖರ ಕೆರಿಮನಿ, ನಾಗರಾಜ ಕಳಸಾಪೂರ, ಪ್ರಕಾಶ ಕೊಂಚಿಗೇರಿಮಠ ಸೇರಿದಂತೆ ಅನೇಕರಿದ್ದರು.

## ಯಳವತ್ತಿಯಲ್ಲಿ ಅಧ್ಯಯನ ಶಿಬಿರ




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಹಾಗೂ ಗ್ರಾಮ ಪಂಚಾಯತ ಯಳವತ್ತಿ ಇವರ ಸಂಯುಕ್ತ ಆಶ್ರಯದಲ್ಲಿ ಯಳವತ್ತಿ ಗ್ರಾಮದಲ್ಲಿ 2023-24ನೇ ಸಾಲಿನ ಗ್ರಾಮವಾಸ್ತವ್ಯ ಮತ್ತು ಅಧ್ಯಯನ ಶಿಬಿರವನ್ನು 'ಗ್ರಾಮೀಣ ಪರಿವರ್ತನೆಗಾಗಿ ಯುವಜನತೆ' ಎಂಬ ಧ್ಯೇಯವಾಕ್ಯದೊಂದಿಗೆ ಶುಕ್ರವಾರ ಉದ್ಘಾಟನಾ ಸಮಾರಂಭವನ್ನು ಏರ್ಪಡಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕುಲಸಚಿವ ಪ್ರೊ. ಸುರೇಶ ವಿ.ನಾಡಗೌಡರ, ವಿಶ್ವವಿದ್ಯಾಲಯದ ಸ್ಥಾಪನೆ, ಗುರಿ, ಉದ್ದೇಶ ಹಾಗೂ ಗ್ರಾಮೀಣ ಅಧ್ಯಯನದ ಕುರಿತು ವಿಷಯಗಳನ್ನು ತಿಳಿಸಿದರು. ಗ್ರಾಮೀಣ ಅಭಿವೃದ್ಧಿಗೆ ವೈಜ್ಞಾನಿಕ ಅಧ್ಯಯನ ಅತಿ ಮುಖ್ಯ ಹಾಗೂ ಜನಪ್ರತಿನಿಧಿಗಳು ಸ್ಥಳೀಯ ಜವಾಬ್ದಾರಿ ಅತ್ಯಂತ ಹೆಚ್ಚಿನ ಪರಿಣಾಮಕಾರಿಯಿಂದ ಕೂಡಿರಬೇಕು ಎಂದು ಅಭಿಪ್ರಾಯಪಟ್ಟರು.

ಗ್ರಾಮದ ಮುಖಂಡರಾದ ಶಿವಣ್ಣ ಗಾಣಿಗೇರ ಇವರು ಯಳವತ್ತಿ ಗ್ರಾಮದ ಇತಿಹಾಸದ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕ ನಿಂಗಪ್ಪ ಡಿ.ಎಸ್., ಗ್ರಾಮದ ಮುಖಂಡರಾದ ಎಂ.ಎಸ್. ಮಲ್ಲರೆಡ್ಡಿ, ಬಸನಗೌಡ ಪಿಡ್ಡಿನಗೌಡರ, ಫಕ್ಕೀರಗೌಡ ಪಾಟೀಲ, ಸುರೇಶ ಬೀರಣ್ಣವರ, ಮಹಾರುದ್ರಪ್ಪ ಶಿರಬಡಗಿ, ಬಸವಣ್ಣಪ್ಪ, ಆಶಾ ಕಾರ್ಯಕರ್ತೆಯರು, ಶಿಬಿರಾರ್ಥಿಗಳು ಹಾಜರಿದ್ದರು.

ಶಿಬಿರದ ಸಂಯೋಜಕ ಡಾ. ಶ್ರೀಧರ ಹಾದಿಮನಿ ಸ್ವಾಗತಿಸಿದರು. ಶಿಬಿರಾರ್ಥಿಗಳಾದ ಶಿವಕುಮಾರ, ಜ್ಯೋತಿ ರಾಥೋಡ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕ ಪ್ರಕಾಶ ಎಸ್. ಮಾಚೇನಹಳ್ಳಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಬಿರಾರ್ಥಿ ಪ್ರವೀಣ ರಾಮನಕಟ್ಟಿ ವಂದಿಸಿದರು.

### ಬಸವೇಶ್ವರ ಮಹಾವಿದ್ಯಾಲಯದಲ್ಲಿ 'ಅವಿರ್ಭಾವ' ಸಾಂಸ್ಕೃತಿಕ ಹಬ್ಬ ಮುಕ್ತಾಯ ಸಮಾರಂಭ

# ಜನಪದಸಾಹಿತ್ಯ ಪರಂಪರೆಯ ಪ್ರತೀಕ




■ ವಿಜಯಸಾಕ್ಷಿ ಸುದ್ದಿ, ಗದಗ

ಜನಪದ ಸಾಹಿತ್ಯ ಕೇವಲ ಸಾಹಿತ್ಯದ ಒಂದು ಭಾಗವಾಗಿರದೆ, ಜನರ ಜೀವನವೇ ಆಗಿದೆ. ನಮ್ಮ ನಾಡು-ನುಡಿ, ಸಂಸ್ಕೃತಿ, ಪರಂಪರೆಯ ಪ್ರತೀಕವಾಗಿದೆ. ಇಂದಿನ ಯುವಕರು ಆಧುನಿಕ ಜನಪ್ರಿಯ ಗೀತೆಗಳಿಗೆ ಮಾರುಹೋಗದೆ ಮೂಲ ಜನಪದ ಸಾಹಿತ್ಯದ ಉಳಿವಿಗೆ ಕೈಜೋಡಿ ಸಬೇಕೆಂದು ಜನಪದ ಕಲಾವಿದ ಗವಿಸಿದ್ಧಯ್ಯ ಹಳ್ಳಿಕೇರಿಮಠ ಕರೆ ನೀಡಿದರು.

ಸ್ಥಳೀಯ ಜಗದ್ಗುರು ತೋಂಟ ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಮಹಿಳಾ ಸಂಘದ ಆಶ್ರಯದಲ್ಲಿ 'ಅವಿರ್ಭಾವ' ಸಾಂಸ್ಕೃತಿಕ ಹಬ್ಬ ಮುಕ್ತಾಯ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಾಲೇಜು ಗಳಲ್ಲಿ ಸಾಂಸ್ಕೃತಿಕ ಹಬ್ಬದಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಜನಪದ, ಸಾಹಿತ್ಯಾಭಿರುಚಿ ಬೆಳೆಯುವಂತ್ತೆ ಮಾಡುತ್ತಿರುವುದು ಶ್ಲಾಘನೀಯ. ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ದೂರವಿದ್ದು ನಾನು ಎನ್ನುವ ಅಂಹಕಾರ ಬಿಟ್ಟು ನಾವು ಎನ್ನುವ ಸಾಮುದಾಯಿಕ ಭಾವನೆ ಬೆಳೆಸಿಕೊಂಡು ತಂದೆ-ತಾಯಿ ಋಣ ತೀರಿಸುವ ಕೆಲಸ ಮಾಡಬೇಕೆಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರಾ ಎಂ.ಎಂ. ಬುರಡಿ ಮಾತನಾಡಿ, ಅವಿರ್ಭಾವ ಸಾಂಸ್ಕೃತಿಕ ಹಬ್ಬ ವಿದ್ಯಾರ್ಥಿಗಳ ಪ್ರತಿಭೆ ಬೆಳೆಸುವಲ್ಲಿ ಪೂರಕವಾಗಿದೆ. ಪಠ್ಯೇತರ ಚಟುವಟಿಕೆಗಳು ನೈತಿಕ ಶಿಕ್ಷಣ ಬೆಳೆಸುವಂ ತವುಗಳಾಗಿವೆ.

ಪ್ರತಿಯೊಬ್ಬರ ವ್ಯಕ್ತಿತ್ವಕ್ಕೆ ಬೆಲೆ ಬರಬೇಕೆಂದರೆ ಸಂಸ್ಕಾರ ಮತ್ತು ಸಹವಾಸ ಮುಖ್ಯವೆಂದು ತಿಳಿಸಿ, ವಿದ್ಯಾರ್ಥಿಗಳು ಅವಕಾಶ ಗಳನ್ನು ಸದುಪಯೋಗ ಪಡಿಸಿಕೊಂಡು ಕ್ರಿಯಾ ಶೀಲರಾಗಿ ಬೆಳೆಯಬೇಕೆಂದು ಹೇಳಿದರು.

ಈರಮ್ಮ ಅಂಗಡಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರೊ. ಆನಂದ ದೇಸಾಯಿಪಟ್ಟಿ ಸ್ವಾಗತಿಸಿ ಪರಿಚಯಿಸಿದರು. ಪ್ರೊ. ವಿನಯ ಮರಡೂರ ವಿದ್ಯಾಥಿಗಳ ಸತ್ಕಾರ ಸಮಾರಂಭ ನಡೆಸಿದರು. ಪ್ರೊ. ಕೆ. ಎಸ್. ಅಣ್ಣಿಗೇರಿ ಸಾಂಸ್ಕೃತಿಕ ಕಾರ್ಯಕ್ರಮ ನಿರ್ವಹಿಸಿದರು. ಪ್ರೊ ಕೆ.ವಿ. ಬಾಗಲಕೋಟಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಶ್ವೇತಾ ಸಿ ವಂದಿಸಿದರು.

## ಪ್ರಧಾನಿ ಮೋದಿ ಪ್ರಚಾರಕ್ಕೆ ಸಿಂಗಾಪುರದ ರೈಲ್ವೆ ನಿಲ್ದಾಣದ ಫೋಟೋ ಬಳಸಿದ ಬಿಜೆಪಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿಯ ವಿವಿಧ ರಾಜ್ಯ ಮತ್ತು ಜಿಲ್ಲಾ ಘಟಕಗಳ ಸಾಮಾಜಿಕ ಜಾಲತಾಣ ಖಾತೆಗಳಲ್ಲಿ ಇತ್ತೀಚೆಗೆ ಪೋಸ್ಟರ್ ಒಂದನ್ನು ಹಂಚಿಕೊಳ್ಳಲಾಗಿತ್ತು.

ಪ್ರಧಾನಿ ನರೇಂದ್ರ ಮೋದಿಯವರ ಫೋಟೋ ಮತ್ತು ಹಿಂಭಾಗದಲ್ಲಿ ಮೆಟ್ರೋ ರೈಲು ಸಾಗುತ್ತಿರು ಚಿತ್ರವಿರುವ ಈ ಪೋಸ್ಟರ್ ಜೊತೆಗೆ "ಉದ್ಯೋಗ ಸೃಷ್ಟಿಯಾಗುತ್ತಿಲ್ಲವಾದರೆ, ಮೆಟ್ರೋ ಸೇವೆಗಳು ಭಾರತದ ವಿವಿಧ ನಗರಗಳನ್ನು ತಲುಪಿದ್ದು ಹೇಗೆ? 2014 ರಲ್ಲಿ 5 ನಗರಗಳಲ್ಲಿ ಇದ್ದ ಮೆಟ್ರೋ ಸೇವೆಗಳು ಈಗ 20 ನಗರಗಳಿಗೆ ವಿಸ್ತರಿಸಿವೆ" ಎಂದು ಬರೆದುಕೊಳ್ಳಲಾಗಿತ್ತು.

ಈ ಪೋಸ್ಟರ್ ಕುರಿತು 'ಆಲ್ಟ್ ನ್ಯೂಸ್' ಫ್ಯಾಕ್ಟ್ ಚೆಕ್ ನಡೆಸಿದ್ದು, ಪೋಸ್ಟರ್‌ನಲ್ಲಿ ಪ್ರಧಾನಿ ಮೋದಿಯವರ ಹಿಂಭಾಗದಲ್ಲಿರುವ ಮೆಟ್ರೋದ ಫೋಟೋವನ್ನು ಗೂಗಲ್ ರಿವರ್ಸ್ ಇಮೇಜ್‌ನಲ್ಲಿ ಹುಡುಕಿದೆ. ಈ ವೇಳೆ ಆ ಫೋಟೋ ಶಾನ್ ಎಂಬ ಛಾಯಾಗ್ರಾಹಕ 'ಅನ್‌ಸ್ಪ್ಲಾಶ್' ಫೋಟೋ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಿದ ಚಿತ್ರಕ್ಕೆ ಹೋಲಿಕೆ ಕಂಡು ಬಂದಿದೆ.

ಆಲ್ಟ್ ನ್ಯೂಸ್ ತಂಡ ಇನ್‌ಸ್ಟಾಗ್ರಾಮ್ ಮುಖಾಂತರ ಶಾನ್ ಅವರನ್ನು ಸಂಪರ್ಕಿಸಿದ್ದು, ಈ ಫೋಟೋ ಸಿಂಗಾಪುರದ ಜುರಾಂಗ್ ಈಸ್ಟ್ ನಿಲ್ದಾಣದ್ದು, ಎಂದು ಸ್ವತಃ ಅವರೇ ಖಚಿತಪಡಿಸಿದ್ದಾರೆ ಎಂದಿದೆ. ಹಾಗಾಗಿ, ಬಿಜೆಪಿಯ ಪೋಸ್ಟರ್‌ನಲ್ಲಿ ಬಳಸಲಾದ ಮೆಟ್ರೋ ರೈಲಿನ ಚಿತ್ರ ಸಿಂಗಾಪುರದ ರೈಲ್ವೆ ನಿಲ್ದಾಣದ್ದೇ ಹೊರತು, ಭಾರತದಲ್ಲ ಎಂಬುವುದನ್ನು ಇದು ಖಚಿತಪಡಿಸುತ್ತದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಅನುದಾನಿತ ಕೋರ್ಸ್‌ಗಳಾದ ಆರ್ಕಿಟೆಕ್ಚರ್ ಅಸಿಸ್ಟೆಂಟ್ ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜನೀಯರಿಂಗ್ ಕೋರ್ಸ್‌ಗಳು ಹಾಗೂ ಅನುದಾನ ರಹಿತ ಕೋರ್ಸ್‌ಗಳಾದ ಜ್ಯುವಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನೀಯರಿಂಗ್ , ಕಂಪ್ಯೂಟರ್ ಅಪ್ಲಿಕೇಷನ್ ( ಫಾರ್ ವಿಜ್ಯುವಲಿ ಇಂಪೇರ್ಡ) , ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ ಮೂರು ವರ್ಷಗಳ ಅವಧಿಯ ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಕ್ಕೆ ವಿಶೇಷ ಚೇತನ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕದ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಟ 35% ಅಂಕಗಳೊಂದಿಗೆ ತೇರ್ಗಡೆ ಹೊಂದಿರಬೇಕು ಹಾಗೂ ಅಂಗವಿಕಲರಾಗಿರಬೇಕು.

ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ವಿದ್ಯಾರ್ಥಿ ವೇತನ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಕಾಶವನ್ನು ಕಲ್ಪಿಸಿಕೊಡಲಾಗುತ್ತದೆ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿ ನಿಲಯದ ಸೌಲಭ್ಯ ಕಲ್ಪಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.jsspda.org ಮೊಬೈಲ್ : 98446 44937 ಮೂಲಕ ಸಂಪರ್ಕಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಜೂನ್ 15 ರೊಳಗೆ ಜೆ ಎಸ್ ಎಸ್ ಮಹಾವಿದ್ಯಾಪೀಠ, ಜೆ ಎಸ್ ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್ ,ಮೈಸೂರು- 570006 ಇಲ್ಲಿ ಸಲ್ಲಿಸಬಹುದಾಗಿದೆ.

## ಮೇ 27ರಂದು ಪಿಂಚಣಿ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ವಿಭಾಗೀಯ ಮಟ್ಟದ ಪಿಂಚಣಿ ಅದಾಲತ್ ನ್ನು ಮೇ 27ರಂದು ಮಧ್ಯಾಹ್ನ 4 ಗಂಟೆಗೆ ಗದಗ ಅಂಚೆ ಇಲಾಖೆಯ ವಿಭಾಗೀಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಅಂಚೆ ಪಿಂಚಣಿದಾರರ ಕುಂದುಕೊರತೆಗಳನ್ನು ಇ-ಮೇಲ್ ವಿಳಾಸ ಜಐಂಚಿಜಚಿ. ka@indiapost.gov.in ಮೂಲಕ ಸಲ್ಲಿಸಬಹುದಾಗಿದೆ.

ಕುಂದುಕೊರತೆಗಳನ್ನು ಮೇ 22 ರೊಳಗಾಗಿ ಅದಾಲತ್, ಅಂಚೆ ಕಚೇರಿಗಳು, ಗದಗ ವಿಭಾಗ, ಗದಗ-582 101 ಇಲ್ಲಿ ಸಲ್ಲಿಸಬಹುದಾಗಿದೆ ಎಂದು ಅಧೀಕ್ಷಕರು, ಅಂಚೆ ವಿಭಾಗೀಯ ಕಚೇರಿ, ಗದಗ ಇವರು ತಿಳಿಸಿದ್ದಾರೆ.

### ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಹೆಬ್ಬಳ್ಳಿ ಗ್ರಾಮಕ್ಕೆ ತಹಸೀಲ್ದಾರ ನೇತೃತ್ವದ ಅಧಿಕಾರಿಗಳ ತಂಡ ಭೇಟಿ

# ಅಗತ್ಯ ಕ್ರಮಕ್ಕೆ ಜಿಲ್ಲಾಧಿಕಾರಿ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಕೊರತೆ ಆಗದಂತೆ ಮುನ್ನೆಚ್ಚರಿಕೆ ವಹಿಸಿ, ಕ್ರಮವಹಿಸಲು ಸೂಚಿಸಲಾಗಿದ್ದರೂ ತಾಂತ್ರಿಕ ಸಮಸ್ಯೆ, ಗ್ರಾಮಸ್ಥರೊಂದಿಗಿನ ಸಂವಹನದ ಕೊರತೆಯಿಂದಾಗಿ ಹೆಬ್ಬಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಸರಬರಾಜುದಲ್ಲಿ ವ್ಯತ್ಯಾಸವಾಗಿ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ಕುರಿತು ಗಮನಕ್ಕೆ ಬಂದ ತಕ್ಷಣ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಶನಿವಾರ ಬೆಳಿಗ್ಗೆ ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ನೇತೃತ್ವದಲ್ಲಿ ಇಓ ಸುಭಾಸ ಸಂಪಗಾಂವಿ, ಗ್ರಾಮೀಣ ಕುಡಿಯುವ ನೀರು ಇಲಾಖೆ, ನರೇಗಾ ಎಡಿ ಮತ್ತು ಸಂಬಂಧಿಸಿದ ಇತರ ಅಧಿಕಾರಿಗಳ ನೇತೃತ್ವದಲ್ಲಿ ಪರಿಶೀಲಿಸಿ, ವರದಿ ನೀಡಲು ಮತ್ತು ಕೈಗೊಳ್ಳಬೇಕಾದ ತುರ್ತು ಕ್ರಮಗಳನ್ನು ಶಿಫಾರಸ್ಸು ಮಾಡಲು ಸೂಚಿಸಿ, ಕಳುಹಿಸಿದ್ದರು.

ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ನೇತೃತ್ವದ ತಂಡವು ಹೆಬ್ಬಳ್ಳಿ ಗ್ರಾಮದಲ್ಲಿರುವ ಮೇಲ್ಮಟ್ಟದ ಜಲ ಸಂಗ್ರಹಗಾರ (ಓಎಚ್‌ಟಿ), ನೆಲಮಟ್ಟದ ಜಲ ಸಂಗ್ರಹಾಗಾರ ಹಾಗೂ ಅಮ್ಮಿನಭಾವಿಯಿಂದ ಕುಡಿಯುವ ನೀರು ಸರಬರಾಜು ಆಗುವ ಪೈಪ್‌ಲೈನ್ ವ್ಯವಸ್ಥೆ ಪರಿಶೀಲಿಸಿತು. ಗ್ರಾಮಸ್ಥರು ಪ್ರತಿನಿತ್ಯ ಕುಡಿಯುವ ನೀರಿನ ಸರಬರಾಜುದಲ್ಲಿ ವಿಳಂಬ, ವ್ಯತ್ಯಯವಾಗುತ್ತಿರುವುದನ್ನು ವಿವರಿಸಿದರು.

ಪ್ರಮುಖವಾಗಿ ಅಮ್ಮಿನಭಾವಿಯಿಂದ ಹೆಬ್ಬಳ್ಳಿಗೆ ನೀರು ಸರಬರಾಜು ಮಾಡುವ ಪೈಪ್‌ಗಳನ್ನು ಪರಿಶೀಲಿಸಬೇಕು. ಓಎಚ್‌ಟಿ ಬದಲಾಯಿಸಬೇಕು ಮತ್ತು ಗ್ರಾಮದ ಜನಸಂಖ್ಯೆ ಹೆಚ್ಚು ಇರುವದರಿಂದ ಇನ್ನೊಂದು ದೊಡ್ಡ ಜಲಸಂಗ್ರಹಾಗಾರ ಕಟ್ಟಿಸಬೇಕೆಂದು ಗ್ರಾಮಸ್ಥರು ವಿನಂತಿಸಿದರು.



ಹೆಬ್ಬಳ್ಳಿ ಗ್ರಾಮದಲ್ಲಿರುವ ಮೇಲ್ಮಟ್ಟದ ಜಲಸಂಗ್ರಹಗಾರ ಕೇವಲ 14 ವರ್ಷ ಹಳೆಯದಾಗಿದ್ದು, ಸುಸ್ಥಿಯಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದಾಗ್ಯೂ ಹಿರಿಯ ಇಂಜಿನಿಯರ್‌ಗಳಿಂದ ಅದರ ಸಾಮರ್ಥ್ಯ ಮತ್ತು ಗುಣಮಟ್ಟವನ್ನು ಮರು ಪರಿಶೀಲನೆ ಮಾಡಿಸುತ್ತೇನೆ. ಹೆಬ್ಬಳ್ಳಿ ಗ್ರಾಮಕ್ಕೆ ಅಂತರ ನಿಲುಗಡೆ ಇಲ್ಲದೆ ಕುಡಿಯುವ ನೀರು ನಿರಂತರವಾಗಿ ಸರಬರಾಜು ಆಗುತ್ತಿದೆ. ಮುಂಗಾರು ಪೂರ್ವದ ಮಳೆ, ಗಾಳಿ ಇತರ ಕಾರಣಗಳಿಂದ ಆಗುವ ಹಠಾತ್ ವಿದ್ಯುತ್ ನಿಲುಗಡೆ, ಆಕಸ್ಮಿಕವಾಗಿ ಉಂಟಾಗುವ ಪೈಪ್ ಸೋರಿಕೆಗಳಿಂದ ಸ್ವಲ್ಪ ಮಟ್ಟಿಗೆ ತೊಂದರೆ ಆಗಿರಬಹುದು. ಎಲ್ಲವನ್ನು ಸರಿಪಡಿಸಿ ಕ್ರಮವಹಿಸಲು, ಗ್ರಾಮ ಪಂಚಾಯತ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಎಲ್ಲ ವಿಚಾರಗಳನ್ನು ತಹಸೀಲ್ದಾರರು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರಿಗೆ ದೂರವಾಣಿ ಮೂಲಕ ತಿಳಿಸಿದಾಗ, ಕುಡಿಯುವ ನೀರಿಗೆ ಸಂಬಂಧಿಸಿದ ಪ್ರಸ್ತಾವನೆಯನ್ನು ತಕ್ಷಣ ತಾಲೂಕು ಟಾಸ್ಕ್ ಫೋರ್ಸ್ ಸಮಿತಿಗೆ ಸಲ್ಲಿಸಿ, ಅನುಷ್ಠಾನಕ್ಕೆ ಅನುಮೋದನೆ ಪಡೆಯಬೇಕು. ಹೆಬ್ಬಳ್ಳಿ ದೊಡ್ಡ ಗ್ರಾಮ, ಅಂದಾಜು 20 ಸಾವಿರದಷ್ಟು ಜನಸಂಖ್ಯೆ ಹೊಂದಿರುವ ಗ್ರಾಮವಾಗಿರುವದರಿಂದ ಸುಮಾರು ಎರಡು ಲಕ್ಷ ಲೀಟರ್ ನೀರು ಸಂಗ್ರಹಣಾ ಸಾಮರ್ಥ್ಯದ ನೆಲಮಟ್ಟದ ಜಲಸಂಗ್ರಹಾಗಾರ ನಿರ್ಮಿಸಲು ಜಲ್ ಜೀವನ್ ಮಿಷನ್ ಯೋಜನೆಯಡಿ ಈಗಾಗಲೇ ಕಾಮಗಾರಿ ಪ್ರಾರಂಭಿಸಲಾಗಿದೆ ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳು ತಿಳಿಸಿದ್ದು, ಸದರಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸಂಬಂಧಿಸಿದ ಗ್ರಾ.ಪಂ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಅದರಂತೆ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ಸಭೆಗೆ ಜಿಲ್ಲಾಧಿಕಾರಿಗಳ ಸಂದೇಶದ ಮಾಹಿತಿ ನೀಡಿ, ಕುಡಿಯುವ ನೀರಿನ ಸಮಸ್ಯೆ ಆಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರಲ್ಲದೆ, ತಾಂತ್ರಿಕ ಕಾರಣದಿಂದ ಕೆಟ್ಟಿದ್ದ ಬೋರ್‌ವೇಲ್ ದುರಸ್ತಿ ಮಾಡಿಸಿ, ಗ್ರಾಮಸ್ಥರ ಸಮ್ಮುಖದಲ್ಲಿ ಮರುಚಾಲನೆಗೊಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಗಾಂವಿ, ಸಹಾಯಕ ನಿರ್ದೇಶಕ ನಿರ್ದೇಶಕ(ಗ್ರಾಉ) ಚಂದ್ರು ಪೂಜಾರ, ಗ್ರಾಮೀಣ ಕುಡಿಯುವ ನೀರು-ನೈರ್ಮಲ್ಯ ಇಲಾಖೆಯ ಸಹಾಯಕ ಇಂಜಿನಿಯರ್ ಚಂದ್ರಶೇಖರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ ಮಾದನಬಾವಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

**ಸೋಮೇಶ್ವರನ ಸನ್ನಿಧಿಗೆ ಪಾದಯಾತ್ರೆಯ ಮೂಲಕ ಆಗಮಿಸಿದ ಯುವಕರ ತಂಡ**

## ಮಾದರಿಯಾದ ಯುವಕರ ತಂಡ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವರಿಗೆ ನಾಡಿನಾದ್ಯಂತ ಭಕ್ತರಿದ್ದು, ಅನೇಕ ಕಡೆಗಳಿಂದ ಜಾತ್ರೆ, ಯುಗಾದಿ, ನವರಾತ್ರಿ, ಕಾರ್ತಿಕ ಇತ್ಯಾದಿ ಸಂದರ್ಭದಲ್ಲಿ ದೇವಸ್ಥಾನಕ್ಕೆ ಆಗಮಿಸಿ ಭಕ್ತಿ ಸಮರ್ಪಣೆ ಮಾಡಿಕೊಳ್ಳುವವರನ್ನು ನೋಡಬಹುದು.

ಈ ನಿಟ್ಟಿನಲ್ಲಿ ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲೂಕಿನ ಹಲಗೇರಿ ಗ್ರಾಮದಿಂದ ಗ್ರಾ.ಪಂ ಸದಸ್ಯ ಪ್ರವೀಣ ಕಡೂರ ನೇತೃತ್ವದ ಸುಮಾರು 21 ಯುವಕರ ತಂಡವು ಹಲಗೇರಿಯಿಂದ ಪಾದಯಾತ್ರೆಯ ಮೂಲಕ ಶುಕ್ರವಾರ ಸಂಜೆ ದೇವಸ್ಥಾನಕ್ಕೆ ಆಗಮಿಸಿದರು. ಪ್ರತಿವರ್ಷ ಜಾತ್ರಾ ಸಮಯದಲ್ಲಿ ಲಕ್ಷ್ಮೇಶ್ವರದ ಸೋಮೇಶ್ವರನ ಸನ್ನಿಧಿಗೆ ಆಗಮಿಸುವ ಈ ತಂಡದ ಸದಸ್ಯರ ಸಂಖ್ಯೆ ಪ್ರತಿವರ್ಷ ಹೆಚ್ಚುತ್ತಿರುವದು ವಿಶೇಷವಾಗಿದೆ.

ಜಾತ್ರೆಯ ದಿನ ಅಂದರೆ ಶನಿವಾರ ದೇವಸ್ಥಾನದಲ್ಲಿ ಅಲ್ಲಲ್ಲಿ ಇರುವ ಕಸವನ್ನು ಸ್ವಚ್ಛಗೊಳಿಸುವದು ಮತ್ತು ಅಂದಿನ ಭಕ್ತರಿಗೆ ಪ್ರಸಾದ ವ್ಯವಸ್ಥೆಗೆ ನೆರವಾಗುವುದು ಮತ್ತು ಜಾತ್ರೆಗೆ ಬರುವ ಸಾವಿರಾರು ಭಕ್ತರಿಗೆ ಅನ್ನಸಂತರ್ಪಣೆ ಸರಿಯಾಗಿ ದೊರಕುವಂತೆ ಮಾಡುವ ನಿಟ್ಟಿನಲ್ಲಿ ಈ ಯುವ ಪಡೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದು, ಇತರರಿಗೂ ಮಾದರಿಯಾಗಿದ್ದಾರೆ.

ಅರುಣ ಕಡೂರ, ಪ್ರಶಾಂತ ಕಡೂರ, ನಿಖಿಲ್ ಕಡೂರ, ಕಿರಣ ಕಡೂರ ಸೇರಿದಂತೆ ಅನೇಕ ಯುವಕರು ಪಾದಯಾತ್ರೆಯ ಮೂಲಕ ಆಗಮಿಸಿದ್ದು, ಎರಡು ದಿನಗಳ ಕಾಲ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಿದ್ದಾರೆ.

> ಪ್ರತಿವರ್ಷ ಜಾತ್ರೆಯ ವೇಳೆಯಲ್ಲಿ ನಮ್ಮ ಮನೆ ದೇವರು ಸೋಮೇಶ್ವರನ ಸನ್ನಿಧಿಗೆ ಪಾದಯಾತ್ರೆಯ ಮೂಲಕ ಬರುವ ಸಂಪ್ರದಾಯವನ್ನು ಪಾಲಿಸಿಕೊಂಡು ಬರುತ್ತಿದ್ದೇವೆ. ಬರಿಗಾಲಿನಲ್ಲಿ ಹಲಗೇರಿಯಿಂದ ಎರಡು ದಿನ ಮುಂಚಿತವಾಗಿ ಹೊರಟು, ಜಾತ್ರೆಯ ವೇಳೆಗೆ ಇಲ್ಲಿ ತಲುಪುತ್ತಿದ್ದೇವೆ. ದೇವರ ಸೇವೆ ಮಾಡುವದು ನಮಗೆ ದೊರಕಿದ ಪುಣ್ಯವಾಗಿದೆ.
>
> – ಪ್ರವೀಣ ಕಡೂರ.
> ಗ್ರಾ.ಪಂ ಸದಸ್ಯ, ಹಲಗೇರಿ.

## ಹತ್ಯೆ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಲು ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ವೀರಾಪುರ ಓಣಿಯ ಅಂಜಲಿಯನ್ನು ಹತ್ಯೆಗೈದಿರುವ ಆರೋಪಿಗೆ ಗಲ್ಲು ಶಿಕ್ಷೆ ನೀಡುವಂತೆ ಒತ್ತಾಯಿಸಿ ಗದಗ ಜಿಲ್ಲಾ ಅಂಬಿಗರ ಸಮಾಜ ಬಾಂಧವರು ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಅಮಾನುಷ ಕೃತ್ಯದಿಂದ ಇಡೀ ಮಾನವ ಸಮಾಜ ತಲೆ ತಗ್ಗಿಸುವಂತಾಗಿದೆ. ಅಲ್ಲದೆ, ಅಂಜಲಿಯೇ ತನ್ನ ಕುಟುಂಬವನ್ನು ನಡೆಸುತ್ತಿದ್ದಳು. ಅವಳ ಹತ್ಯೆಯಿಂದ ಕುಟುಂಬ ಬೀದಿಗೆ ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಪೊಲೀಸ್ ಇಲಾಖೆ ಹಾಗೂ ರಾಜ್ಯ ಸರಕಾರ ಎಚ್ಚೆತ್ತುಕೊಂಡು ಆರೋಪಿಯನ್ನು ಬಂಧಿಸಿ ಗಲ್ಲು ಶಿಕ್ಷೆಗೆ ಒಳಪಡಿಸಬೇಕು, ಯುವತಿಯ ಕುಟುಂಬಕ್ಕೆ ಸೂಕ್ತ ಪರಿಹಾರವನ್ನು ನೀಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಮಾಜದ ಸಂಘಟನಾ ಕಾರ್ಯದರ್ಶಿ ಅಮಿತ್ ಪೂಜಾರ್, ಗುರಪ್ಪ ತಿರ್ಲಾಪುರ್, ಬಸವರಾಜ್ ಗುಡಿಸಾಗರ, ಮಹದೇವ ಬಾಣದ್, ಮಂಜು ಅಂಬಿಗೇರ, ಹರೀಶ್ ಬಾರಕೇರ್, ರಮೇಶ್ ಬೆಣಕಲ್, ಬೆಣಕಲ್ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಕಿರ್ಗಿಸ್ತಾನ್‌ನಲ್ಲಿ ಹಿಂಸಾಚಾರ: ಮನೆಬಿಟ್ಟು ಹೊರಬರದಂತೆ ಭಾರತೀಯ ವಿದ್ಯಾರ್ಥಿಗಳಿಗೆ ಸೂಚನೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಿರ್ಗಿಸ್ತಾನ್‌ನ ರಾಜಧಾನಿ ಬಿಷ್ಕೆಕ್‌ನಲ್ಲಿ ವಿದೇಶಿ ವಿದ್ಯಾರ್ಥಿಗಳನ್ನು ಗುರಿಯಾಗಿಸಿಕೊಂಡು ಗುಂಪು ಹಿಂಸಾಚಾರದ ವರದಿಗಳ ಮಧ್ಯೆ ಭಾರತ ಮತ್ತು ಪಾಕಿಸ್ತಾನವು ಶನಿವಾರ ಬಿಷ್ಕೆಕ್‌ನಲ್ಲಿರುವ ವಿದ್ಯಾರ್ಥಿಗಳಿಗೆ ತಾವು ತಂಗಿರುವ ಹಾಸ್ಟೆಲ್, ಮನೆಗಳಿಂದ ಹೊರಗೆ ಬರದಂತೆ ಸೂಚಿಸಿದೆ. ಕಿರ್ಗಿಸ್ತಾನ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯು "ಪರಿಸ್ಥಿತಿ ಪ್ರಸ್ತುತ ಶಾಂತವಾಗಿದೆ" ಎಂದು ಹೇಳಿದೆ, ಆದರೆ ಭಾರತ, ಬಾಂಗ್ಲಾದೇಶ ಮತ್ತು ಪಾಕಿಸ್ತಾನದ ವಿದ್ಯಾರ್ಥಿಗಳು ವಾಸಿಸುವ ಬಿಷ್ಕೆಕ್‌ನಲ್ಲಿರುವ ವೈದ್ಯಕೀಯ ವಿಶ್ವವಿದ್ಯಾಲಯಗಳ ಹಾಸ್ಟೆಲ್‌ಗಳ ಮೇಲೆ ದಾಳಿ ಮಾಡಲಾಗಿದೆ ಎಂದು ಪಾಕಿಸ್ತಾನ ಹೇಳಿಕೊಂಡಿದೆ.

ನಾವು ನಮ್ಮ ವಿದ್ಯಾರ್ಥಿಗಳೊಂದಿಗೆ ಸಂಪರ್ಕದಲ್ಲಿದ್ದೇವೆ. ಪ್ರಸ್ತುತ ಪರಿಸ್ಥಿತಿ ಶಾಂತವಾಗಿದೆ ಆದರೆ ವಿದ್ಯಾರ್ಥಿಗಳು ಸದ್ಯಕ್ಕೆ ಮನೆಯೊಳಗೆ ಇರಲು ಮತ್ತು ಯಾವುದೇ ಸಮಸ್ಯೆಯ ಸಂದರ್ಭದಲ್ಲಿ ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿರಲು ಸಲಹೆ ನೀಡಲಾಗುತ್ತದೆ. ಅಗತ್ಯಬಿದ್ದರೆ 24x7 ಸಂಪರ್ಕ ಸಂಖ್ಯೆ 0555710041ಕ್ಕೆ ಕರೆ ಮಾಡುವಂತೆ ಸೂಚಿಸಲಾಗಿದೆ.

## ನಿಧನ ವಾರ್ತೆ

**ಬಸವರಾಜ ಎಸ್.ಬೆಂಗಳೂರು**



ಗದಗ: ಬೆಂಗಳೂರು ಪ್ರಿಂಟಿಂಗ್ ಪ್ರೆಸ್ ಮಾಲಿಕರಲ್ಲಿ ಒಬ್ಬರಾದ, ರೇಷನ್ ಕಾರ್ಡ್ ಅಜ್ಜ ಎಂದೇ ಪ್ರಖ್ಯಾತಿ ಪಡೆದಿದ್ದ ಗದಗ ಶಹರದ ಬಸವೇಶ್ವರ ನಗರದ ನಿವಾಸಿ ಬಸವರಾಜ ಎಸ್.ಬೆಂಗಳೂರು (ಬೆಂಗಳೂರು ಅಜ್ಜ) ಶನಿವಾರ ತಮ್ಮ 68ನೇ ವಯಸ್ಸಿನಲ್ಲಿ ನಿಧನರಾದರು. ಮೃತರು ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತಿಮ ಯಾತ್ರೆಯು ರವಿವಾರ ಮುಂಜಾನೆ 10ಕ್ಕೆ ಬಸವೇಶ್ವರ ನಗರದ ಸ್ವಗೃಹದಿಂದ ಹೊರಡಲಿದೆ.

**ಜಿಲ್ಲಾ ಕಸಾಪದಿಂದ ಅಳವಂಡಿ ಶಿವಮೂರ್ತಿಸ್ವಾಮಿಗಳ ದತ್ತಿ ಉಪನ್ಯಾಸ**

# 'ಕರ್ನಾಟಕದ ಹುಲಿ' ಅಳವಂಡಿ ಸ್ವಾಮಿಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಏಕೀಕರಣ ಚಳವಳಿ, ಹೈದರಾಬಾದ ಕರ್ನಾಟಕ ವಿಮೋಚನಾ ಚಳವಳಿಯ ನೇತಾರರಾಗಿ ಕನ್ನಡ ನಾಡು-ನುಡಿಗೆ ತಮ್ಮನ್ನೇ ಸಮರ್ಪಿಸಿಕೊಂಡ ಮಹಾನ್ ಚೇತನ ಅಳವಂಡಿ ಶಿವಮೂರ್ತಿಸ್ವಾಮಿಗಳು. ಅವರ ಹೋರಾಟದ ಫಲವಾಗಿ ಹೈದ್ರಾಬಾದ ಕರ್ನಾಟಕದ ಅನೇಕ ಪ್ರದೇಶಗಳು ಕನ್ನಡ ನಾಡಿಗೆ ಬರಲು ಸಾಧ್ಯವಾಯಿತು. ದಿಟ್ಟ ಹೋರಾಟಗಾರ, 'ಕರ್ನಾಟಕದ ಹುಲಿ' ಅಳವಂಡಿ ಶಿವಮೂರ್ತಿಸ್ವಾಮಿಗಳಾಗಿದ್ದರೆಂದು ಗದುಗಿನ ಸರಕಾರಿ ಪ್ರಥಮದರ್ಜೆ ಮಹಿಳಾ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ಎಸ್.ಯು. ಸಜ್ಜನಶೆಟ್ಟರ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಗದುಗಿನ ಜಗದ್ಗುರು ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜರುಗಿದ ವೇದಮೂರ್ತಿ ಅಳವಂಡಿ ಶಿವಮೂರ್ತಿಸ್ವಾಮಿಗಳ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಕರ್ನಾಟಕ ಏಕೀಕರಣ ಚಳವಳಿ ಮತ್ತು ಅಳವಂಡಿ ಶಿವಮೂರ್ತಿ ಸ್ವಾಮಿಗಳು' ಎಂಬ ವಿಷಯವಾಗಿ ಮಾತನಾಡಿದರು.

1955ರಲ್ಲಿ ಭಾಷಾವಾರು ಪ್ರಾಂತ್ಯ ರಚನೆ ಸಂದರ್ಭದಲ್ಲಿ ಕರ್ನಾಟಕದ ಬಳ್ಳಾರಿ ಹೊಸಪೇಟೆ ಹಂಪಿ ಮತ್ತು ತುಂಗಭದ್ರಾ ಆಣೆಕಟ್ಟು ಪ್ರದೇಶವನ್ನು ವಿಶಾಲ ಆಂಧ್ರಪ್ರದೇಶಕ್ಕೆ ಸೇರಿಸುವಂತೆ ಅಂದಿನ ಫಜಲ್ ಅಲಿ ಕಮಿಶನ್ ನಿರ್ಧರಿಸಿತ್ತು. ಇದನ್ನು ತೀವ್ರವಾಗಿ ವಿರೋಧಿಸಿದ ಸ್ವಾಮಿಗಳು, ಸಾವಿರಾರು ರೈತರನ್ನು ಸಂಘಟಿಸಿ ಆಮರಣ ಉಪವಾಸ ಸತ್ಯಾಗ್ರಹ ಮಾಡಿದ್ದರು. ಇದರ ಫಲವಾಗಿ ನ್ಯಾಯಮೂರ್ತಿ ಮಿಶ್ರ ಸಮಿತಿ ನೇಮಕವಾಗಿ ಬಳ್ಳಾರಿ ಮತ್ತು ತುಂಗಭದ್ರಾ ಡ್ಯಾಂ ಪ್ರದೇಶ ಕರ್ನಾಟಕಕ್ಕೆ ಸೇರ್ಪಡೆಗೊಳ್ಳುವ ಮೂಲಕ ಐತಿಹಾಸಿಕ ಘಟನೆಗೆ ಅವರು ಕಾರಣೀಭೂತರಾಗಿದ್ದಾರೆಂದರು.




ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಿವಮೂರ್ತಿ ಸ್ವಾಮಿಗಳು ಬದುಕಿನುದ್ದಕ್ಕೂ ಮಾನವೀಯತೆ ಮೆರೆದವರು. ರಾಷ್ಟ್ರೀಯ ಸಮಸ್ಯೆಗಳನ್ನು ತಮ್ಮ ಸಮರ್ಥ ವಾಕ್ಪಟುತ್ವದಿಂದ ಪರಿಣಾಮಕಾರಿಯಾಗಿ ಪ್ರತಿಪಾದಿಸಿ ಸರಕಾರದ ಗಮನಸೆಳೆದ ತತ್ವನಿಷ್ಠ ರಾಜಕಾರಣಿ, ಆದರ್ಶಜನನಾಯಕ. ತಮ್ಮ 20ನೇ ವಯಸ್ಸಿನಲ್ಲಿಯೇ ಸ್ವಾತಂತ್ರ್ಯ ಚಳವಳಿಯಲ್ಲಿ ಪಾಲ್ಗೊಂಡು ಪ್ರಮುಖ ಪಾತ್ರ ವಹಿಸಿದ್ದರೆಂದರು.

ವೇದಿಕೆ ಮೇಲೆ ಕ.ವಿ.ವ. ಸಮಿತಿ ಕಾರ್ಯದರ್ಶಿ ವಿ.ಆರ್. ಕಟ್ಟಿಮನಿ ಹಿರೇಮಠ, ಪ್ರಾಚಾರ್ಯ ಡಾ. ಬಿ.ಬಿ. ಹೊಳಗುಂದಿ, ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಪ್ರಾ.ಶಾ. ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಡಿ.ಎಸ್. ತಳವಾರ, ಎಸ್.ಎಸ್. ಕಳಸಾಪುರಶೆಟ್ರು, ಆರ್.ಡಿ. ಕಪ್ಪಲಿ, ಪ್ರ.ತೋ. ನಾರಾಯಣಪುರ, ಎಚ್.ಟಿ. ಸಂಜೀವಸ್ವಾಮಿ, ಎಚ್.ಕೆ. ದಾಸರ, ಷಡಕ್ಷರಯ್ಯಸ್ವಾಮಿ ಕಣ್ವಿಮಠ, ಮಹಾವಿದ್ಯಾಲಯದ ಉಪನ್ಯಾಸಕರಾದ ಡಾ. ಶಿಲ್ಪಾ ಹಿರೇಕೇರೂರ, ಡಾ. ಎಂ.ಎಸ್. ಶಿರೋಳ,ಡಾ. ಎಸ್.ಎಮ್. ರಾಯನಗೌಡರ, ಟಿ.ಎಫ್. ನದಾಫ್, ವಿಜಯಲಕ್ಷ್ಮೀ ಆರ್.ಎಚ್, ಎಂ.ಎಲ್. ಬೆಳಧಡಿ, ಡಿ.ಆರ್. ಜಗ್ಗಲ್ ಹಾಗೂ ಬಿ.ಇಡಿ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.

ಡಾ. ಹೊಳಗುಂದಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಯಶೋಧಾ ನಾಯ್ಕರ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಕಿಶೋರಬಾಬು ನಾಗರಕಟ್ಟಿ ವಂದಿಸಿದರು.

> ಅಳವಂಡಿಯಲ್ಲಿ ಕರ್ನಾಟಕ ವಿದ್ಯಾಲಯ ಹಿರಿಯ ಪ್ರಾಥಮಿಕ ಶಾಲೆ, ಸಿದ್ದೇಶ್ವರ ಸಂಯುಕ್ತ ಪದವಿಪೂರ್ವ ಕಾಲೇಜು, ಉಚಿತ ಪ್ರಸಾದ ನಿಲಯ, ಅನಾಥ ಮಕ್ಕಳ ನಿಲಯ, ಜ.ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯ ಸ್ಥಾಪಿಸಿ ಶೈಕ್ಷಣಿಕ ಕ್ಷೇತ್ರಕ್ಕೂ ನಾಂದಿ ಹಾಡಿದರು. ಸ್ವಾಮಿಗಳು ನಾಡಿಗೆ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಕರ್ನಟಕ ಸರಕಾರ 2006ರಲ್ಲಿ 'ಸುವರ್ಣ ಏಕೀಕರಣ ಪುರಸ್ಕಾರ' ನೀಡಿ ಗೌರವಿಸಿದೆಯೆಂದು ಪ್ರೊ. ಸಜ್ಜನಶೆಟ್ಟರ ನುಡಿದರು.

**ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಿಂದ ಮಾವು ಬೆಳೆಗಾರರ ವಿಚಾರ-ವಿಮರ್ಶೆ**

# ಮಾವು ಬೆಳೆಯ ಕುರಿತು ರೈತರ ಚರ್ಚೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಸುಮಾರು 3200 ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯಲಾಗುತ್ತಿದ್ದು, ಮಾವು ಬೆಳೆಗಾರರು ಉತ್ತಮ ಲಾಭವನ್ನು ಪಡೆದಿದ್ದಾರೆ. ಆದರೆ ಕಳೆದ 3-4 ವರ್ಷಗಳಿಂದ ಗದಗ ಜಿಲ್ಲೆಯಲ್ಲಿ ಮಾವು ಉತ್ಪಾದನೆ ಕುಸಿತವಾಗಿದ್ದು, ಮಾವು ಬೆಳೆಗಾರರು ಸಂಕಷ್ಟದಲ್ಲಿದ್ದಾರೆ. ಈ ನಿಟ್ಟಿನಲ್ಲಿ ಬಾಗಲಕೋಟೆಯ ತೋಟಗಾರಿಕೆ ವಿಶ್ವವಿದ್ಯಾಲಯ, ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಬೆಂಗಳೂರು ಹಾಗೂ ಕೃಷಿ ವಿಶ್ವ ವಿದ್ಯಾಲಯ (ಜಿಕೆವಿಕೆ) ಬೆಂಗಳೂರಿನ ವಿಜ್ಞಾನಿಗಳು ಹಾಗೂ ಗದಗ ಜಿಲ್ಲೆಯ ಮಾವು ಬೆಳೆಗಾರರ ವಿಚಾರ-ವಿಮರ್ಶೆ ಸಭೆಯನ್ನು ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇತ್ತೀಚೆಗೆ ಏರ್ಪಡಿಸಲಾಗಿತ್ತು.



ಧಾರವಾಡದ ಪ್ರಾದೇಶಿಕ ತೋಟಗಾರಿಕೆ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ ಮುಖ್ಯಸ್ಥ ಡಾ. ಲಕ್ಷ್ಮಣ ಕುಕನೂರ ರೈತರ ಸಮಸ್ಯೆಗಳನ್ನು ಆಲಿಸಿ, ರೈತರಿಗೆ ವೈಜ್ಞಾನಿಕವಾಗಿ ತೋಟದ ನಿರ್ವಹಣೆ ಮಾಡುವ ಕ್ರಮಗಳನ್ನು ಸಮಯಕ್ಕೆ ಸರಿಯಾಗಿ ಕೈಗೊಳ್ಳಬೇಕೆಂದು ಹೇಳಿದರು. ಜಿಕೆವಿಕೆ ಬೆಂಗಳೂರಿನ ತಳಿ ಅಭಿವೃದ್ಧಿ ವಿಭಾಗದ ನಿವೃತ್ತ ತೋಟಗಾರಿಕಾ ಪ್ರಾಧ್ಯಾಪಕ ಡಾ. ಜಿ.ಕೆ. ಮುಕುಂದ ಆಪೂಸ್ ತಳಿಯೊಂದಿಗೆ ವಿವಿಧ ಮಾವಿನ ತಳಿಗಳಾದ ಕೇಸರ, ಮಲ್ಲಿಕಾ ಹಾಗೂ ರತ್ನ ತಳಿಗಳನ್ನು ಬೆಳೆಯುವದರಿಂದ ಉತ್ತಮ ಪರಾಗಸ್ಪರ್ಶಗೊಂಡು ಅಧಿಕ ಇಳುವರಿ ಪಡೆಯಬಹುದು ಎಂದು ಹೇಳಿದರು.

ಜೈವಿಕ ತಂತ್ರಜ್ಞಾನ ಮತ್ತು ಬೆಳೆ ಅಭಿವೃದ್ಧಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಮಲ್ಲಿಕಾರ್ಜುನ ಅವಟಿ, ಹಣ್ಣು ವಿಜ್ಞಾನ ವಿಭಾಗದ ಸಹ ಪ್ರಾಧ್ಯಾಪಕ ಡಾ. ಪ್ರವೀಣ ಜೋಳಗಿಕರ, ಕೀಟಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಜೆ.ಬಿ. ಗೋಪಾಲಿ, ಸಸ್ಯ ರೋಗ ಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಡಾ. ರಮೇಶ ರೈತರಿಗೆ ಸೂಕ್ತ ಮಾಹಿತಿ ನೀಡಿದರು.

ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕೆ ತಜ್ಞರು, ಗದಗ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕ ಡಾ.ಶಶಿಕಾಂತ ಕೋಟಿಮನೆ ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಗದಗ ಜಿಲ್ಲೆಯ ಮಾವಿನ ಬೆಳೆಯ ಕಡಿಮೆ ಉತ್ಪಾದಕತೆಯ ಸಮಸ್ಯೆಗಳನ್ನು ವಿವರಿಸಿದರು. ಗದಗ ಜಿಲ್ಲೆಯ ಮಾವು ಬೆಳೆಗಾರರ ಸಂಘದ ಅಧ್ಯಕ್ಷರು ಹಾಗೂ 56 ಜನ ಮಾವು ಬೆಳೆಗಾರರು ಭಾಗವಹಿಸಿ, ಉಪಯುಕ್ತ ಮಾಹಿತಿಯನ್ನು ಪಡೆದುಕೊಂಡರು.

> ಬೆಂಗಳೂರಿನ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ಪ್ರಧಾನ ವಿಜ್ಞಾನಿ ಡಾ. ಬಿ.ಎಲ್. ಮಂಜುನಾಥ ತಮ್ಮ ಸಂಸ್ಥೆಯಿಂದ ಬಿಡುಗಡೆಯಾದ ವಿವಿಧ ಮಾವಿನ ತಳಿಗಳು ಮತ್ತು ಮಾವಿನ ಬೆಳೆಯ ನಿರ್ವಹಣೆಯಲ್ಲಿ ಅನುಸರಿಸಬೇಕಾದ ವಿವಿಧ ತಂತ್ರಜ್ಞಾನಗಳ ಕುರಿತು ರೈತರಿಗೆ ವಿವರಿಸಿದರು. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯ ಮಣ್ಣು ವಿಜ್ಞಾನ ಮತ್ತು ಕೃಷಿ ರಸಾಯನ ಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕ ಡಾ. ಎಸ್.ಎಮ್. ಪ್ರಸನ್ನ ಮಣ್ಣು ಪರೀಕ್ಷೆ ಆಧಾರಿತ ಪೋಷಕಾಂಶಗಳ ಬಳಕೆ ಹಾಗೂ ಮಾವಿನ ಬೆಳೆಯಲ್ಲಿ ಸಮಗ್ರ ಪೋಷಕಾಂಶಗಳ ನಿರ್ವಹಣೆ ಕುರಿತು ವಿವರಿಸಿದರು.

## ಜಾತ್ರೆಗಳು ಬಾಂಧವ್ಯ ಬೆಸೆಯುತ್ತವೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾಮಹೋತ್ಸವ ಹಿನ್ನೆಲೆಯಲ್ಲಿ ಬಾಗಲಕೋಟೆಯ ಲಡ್ಡುಮುತ್ಯಾ ಅಜ್ಜನವರು ಭೇಟಿ ನೀಡಿ ಸೋಮೇಶ್ವರ ದರ್ಶನ ಪಡೆದು ಭಕ್ತರಿಗೆ ಆಶೀರ್ವಾದ ನೀಡಿದರು.

ಈ ವೇಳೆ ಆಶೀರ್ವಚನ ನೀಡಿದ ಅವರು, ಜಾತ್ರೆ, ಹಬ್ಬ-ಹರಿದಿನಗಳು ಪರಸ್ಪರರಲ್ಲಿ ಸ್ನೇಹ, ಬಾಂಧವ್ಯ, ಸೌಹಾರ್ದತೆ, ನಾವೆಲ್ಲ ಒಂದು ಎಂಬ ಭಾವನೆ ಬೆಸೆಯುತ್ತವೆ. ನಮ್ಮ ದೇಶದಲ್ಲಿ ಪೂರ್ವಜರ ಕಾಲದಿಂದಲೂ ನಡೆದುಕೊಂಡು ಬಂದ ಧಾರ್ಮಿಕ, ಸಾಂಪ್ರದಾಯಿಕ, ಸಾಂಸ್ಕೃತಿಕ, ಸಾಮಾಜಿಕ ಕಾರ್ಯಗಳು ಮುಂದುವರೆಯಬೇಕು. ಪುಲಿಗೆರೆಯ ಶ್ರೀ ಸೋಮೇಶ್ವರನ ಮಹಿಮೆ ಅಪಾರವಾಗಿದ್ದು, ನಂಬಿದ ಭಕ್ತರ ಇಷ್ಟಾರ್ಥ ಸಿದ್ಧಿಸುವ ಪಾರ್ವತಿ-ಪರಮೇಶ್ವರರೀರ್ವರೂ ನಂದಿ ಮೇಲೆ ಸಂಚಾರ ಹೊರಟಿರುವ ವಿಶೇಷವಾದ ಮೂರ್ತಿ ದಕ್ಷಿಣ ಭಾರತದಲ್ಲಿಯೇ ಅಪರೂಪ. ಈ ದೇವಸ್ಥಾನದ ದರ್ಶನ ಜ್ಯೋತಿರ್ಲಿಂಗ ದರ್ಶನದಷ್ಟೇ ಶ್ರೇಷ್ಠ ಎಂದ ಅವರು, ಈ ವರ್ಷ ಉತ್ತಮ ಮಳೆ-ಬೆಳೆ ಲಭಿಸಿ ಎಲ್ಲರಿಗೂ ಸುಖ-ಶಾಂತಿ, ನೆಮ್ಮದಿ ಲಭಿಸಲಿ ಎಂದು ಆಶೀರ್ವದಿಸಿದರು.ಪಟ್ಟಣ ಸೇರಿ ಎಲ್ಲೆಡೆಯಿಂದ ಆಗಮಿಸಿದ್ದ ಭಕ್ತರಿಗೆ ಲಡ್ಡುಮುತ್ಯಾ ಅಜ್ಜನವರು ಆಶೀರ್ವಾದ ನೀಡಿದರು. ಈ ವೇಳೆ ಹಿರಿಯರಾದ ಕುಬೇರಪ್ಪ ಮಹಾಂತಶೆಟ್ಟರ, ಸುರೇಶ ರಾಚನಾಯ್ಕರ, ದಿಗಂಬರ ಪೂಜಾರ, ಬಸವರಾಜ ಮೆಣಸಿನಕಾಯಿ, ರಾಜಶೇಖರ ಶಿಗ್ಲಿಮಠ ಸೇರಿ ಹಲವರಿದ್ದರು.

## ಗ್ರೀನ್ ಗದಗ ವಾಯುಮಾಲಿನ್ಯ ತಪಾಸಣಾ ಕೇಂದ್ರ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಕುಷ್ಟಗಿ ಚಾಳದ ಬಳಿ ನೂತನವಾಗಿ ಪ್ರಾರಂಭವಾದ ಗ್ರೀನ್ ಗದಗ ವಾಹನಗಳ ವಾಯುಮಾಲಿನ್ಯ ತಪಾಸಣಾ ಕೇಂದ್ರವನ್ನು ಸೈಂಟ್‌ಜಾನ್ ಹೈಸ್ಕೂಲ್ ಪ್ರಾಂಶುಪಾಲ ರೆವರೆಂಡ್ ಫಾದರ್ ರಾಜಪ್ಪ ಎ., ಡಿವೈಎಸ್‌ಪಿ ಜೆ.ಎಚ್. ಇನಾಮದಾರ, ಯಲ್ಲಪ್ಪ ಮಿಸ್ಕಿನ್ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಶ್ಯಾಮವೆಲ್ ಕೋಲಾರ, ಜಯರಾಜ ಮುಳಗುಂದ, ಜಾನ್ ಥಾಮಸ್, ಅನಂತಭಟ್, ರಮೇಶ ಶಿಗ್ಲಿ, ಆರೀಫ ಲಖಾನಿ, ಅನಿಲ ತೆಂಬದಮನಿ, ಲಾರೆನ್ಸ್ ಕಂಬಳಿ, ಅರ್ಥರ್ ದಲಬಂಜನ, ಹೇಮಂತ ಜೋಶಿ, ಮಾರ್ಟಿನ್ ಧರ್ಮದಾಸ, ಜಗದೀಶ ಅರಮನಿ, ಅರವಿಂದ ಹುಲ್ಲೂರ, ದೀಪಕ್ ಮುದಗಲ್, ಮಾಣಿಕ್, ಸಿದ್ದಲಿಂಗಪ್ಪ ಪಿಳ್ಳೆ, ವಿಶ್ವನಾಥ ಖಾನಾಪೂರ, ಭರತ್ ನವಲೂರಕರ್, ಹನಮಂತ ಕಟ್ಟಿಮನಿ, ಮಹೇಶ ಶಟವಾಜಿ, ಸಮದ್ ಶಿರಹಟ್ಟಿ ಹಾಗೂ ಮಾಲಕರಾದ ನೀಲ್ ದಲಬಂಜನ ಹಾಗೂ ಕುಟುಂಬಸ್ಥರು ಉಪಸ್ಥಿತರಿದ್ದರು.

## ಹಿರೆ ಕೆರೆ ಅಭಿವೃದ್ಧಿ ಕಾರ್ಯ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಲ್ಲಿನ ವರುಣ ಬೆವರೇಜೆಸ್ ಮತ್ತು ಆರ್.ಜೆ. ಫೌಂಡೇಶನ್ ವತಿಯಿಂದ ನರೇಂದ್ರ ಗ್ರಾಮದ ಹಿರೆ ಕೆರೆಯ ಅಂತರ್ಜಲ ಹೆಚ್ಚಿಸುವ ನಿಟ್ಟಿನಲ್ಲಿ ಕೊಳವೆ ಬಾವಿ ನಿರ್ಮಾಣ, ಕೆರೆಯ ಸ್ವಚ್ಛತೆ ಮತ್ತು ಗ್ರಾಮದ ನಿವಾಸಿಗಳ ಹಿತರಕ್ಷಣೆಗಾಗಿ ಪಥ ನಿರ್ಮಾಣ, ನಿವಾಸಿಗಳಿಗೆ ತಂಗುದಾಣ, ಬೆಂಚುಗಳ ವ್ಯವಸ್ಥೆ ಹಾಗೂ ಸೌರದೀಪಗಳನ್ನು ಅಳವಡಿಸಿದ್ದು, ಈ ಎಲ್ಲಾ ಕೆಲಸಗಳ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಆಗಮಿಸಿದ ಪ್ರೊ. ಡಾ.ರವಿ ಪಾಟೀಲ, ಪರಿಸರದ ಮಹತ್ವ ಮತ್ತು ಕೆರೆಯ ಸಂರಕ್ಷಣೆಯ ಕುರಿತು ಮಾತನಾಡಿ, ವರುಣ ಬೆವರೇಜೆಸ್ ಕೈಗೊಂಡಿರುವ ಕೆಲಸದ ಬಗ್ಗೆ, ಸಾಮಾಜಿಕ ಕಳಕಳಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

**ಪತ್ರಿಕಾಗೋಷ್ಠಿಯಲ್ಲಿ ಬೀದಿ ಬದಿ ವ್ಯಾಪಾರಿಗಳ ಸಂಘದ ಭಾಷಾಸಾಬ ಮಲ್ಲಸಮುದ್ರ ಆರೋಪ**

# ಕಾನೂನು ಬದ್ಧ ಹಕ್ಕು ಪಾಲಿಸದ ಜಿಲ್ಲಾಡಳಿತ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಜೀವನೋಪಾಯ ಹಾಗೂ ಬೀದಿ ವ್ಯಾಪಾರಿಗಳ ನಿಯಂತ್ರಣ ಹಾಗೂ ಸಂರಕ್ಷಣಾ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದೆ, ಬೀದಿ ಬದಿ ವ್ಯಾಪಾರಿಗಳಿಗೆ ಅನ್ಯಾಯವೆಸಗಲಾಗುತ್ತಿದೆ ಎಂದು ಬೀದಿ ಬದಿ ವ್ಯಾಪಾರಿಗಳ ಸಂಘದ ಭಾಷಾಸಾಬ ಮಲ್ಲಸಮುದ್ರ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆಗೆ ಸರಿಸುಮಾರು 3.ಕೋಟಿ 95.ಲಕ್ಷಗಳು ಅನುದಾನ ನೀಡಿದರೂ, ಗದಗ ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಸಮುದಾಯ ಸಂಘಟನಾ ಅಧಿಕಾರಿಗಳ ಟಿ.ವಿ.ಸಿ. ಸಭೆಯ ಗಮನಕ್ಕೆ ತರದೆ, ತಮಗೆ ಬೇಕಾಗುವಷ್ಟು ಹಣ ಬಳಕೆ ಮಾಡಿಕೊಂಡು ಇನ್ನುಳಿದ ಅಂದಾಜು 2 ಕೋಟಿ 50. ಲಕ್ಷ ಹಣ ಹಿಂತಿರುಗಿಸಿದ್ದಾರೆ. ಮುಖ್ಯವಾಗಿ ಬೀದಿ ವ್ಯಾಪಾರಿಗಳಿಂದ ಪ್ರತಿನಿತ್ಯ ಶುಲ್ಕ ಸಂಗ್ರಹ ಮಾಡಿ ಪಟ್ಟಣ ಮಾರಾಟ ಸಮಿತಿಗೆ ಜಮೆ ಮಾಡಲು ರಾಜ್ಯ ಅಭಿಯಾನ ನಿರ್ದೇಶಕರು ನಿರ್ದೇಶನ ನೀಡಿದರೂ, ಜಿಲ್ಲಾ ಯೋಜನಾ ನಿರ್ದೇಶಕರು ಹಾಗೂ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ನಮ್ಮವರ ಜೊತೆ ಸಭೆ ಮಾಡುವ ನಾಟಕವಾಡಿ ಬೀದಿ ವ್ಯಾಪಾರಿಗಳ ಶುಲ್ಕ ಸಂಗ್ರಹ ಮಾಡಲು ನಡಾವಳಿ ಪತ್ರ ಹಾಗೂ ಆದೇಶ ಪತ್ರ ಮುಖ್ಯಾಧಿಕಾರಿಗಳಿಗೆ ನೀಡಿ ಬೀದಿ ವ್ಯಾಪಾರಿಗಳ ಶುಲ್ಕ ಸಂಗ್ರಹ ಮಾಡದೆ ಆಯಾ ಸ್ಥಳೀಯ ಸಂಸ್ಥೆಗಳಲ್ಲಿ ಬೀದಿ ವ್ಯಾಪಾರಿಗಳಿಂದ ಸಂತೆ ಕರವೆಂದು ಗುತ್ತಿಗೆದಾರರು ವಸೂಲಿ ಮಾಡುತ್ತಿರುವುದು ಸಮಂಜಸವಲ್ಲ ಎಂದರು.




ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಧ್ಯಕ್ಷರಾದ ಮಕ್ತುಂಸಾಬ ನಾಲಬಂದ, ಮಾರುತಿ ಸೋಳಂಕಿ, ಬಸುರಾಜ, ಮಂಜುನಾಥ, ಆನಂದ ಕೋಳಿ, ಭೀಮಣ್ಣ ಕೋಳಿ, ಮಹಮ್ಮದ ಕಾತರಕಿ, ಕಳಕಪ್ಪ ಪೋತಾ, ಹನಮಂತಪ್ಪ, ಶಿವಾನಂದ,ಜಹಾಂಗೀರ ಅಹ್ಮದ, ರಶೀದಾ ನದಾಫ, ರೇಣುಕಾ ಹತ್ತಿವಾಲೆ, ಭಾಷಾಸಾಬ ಮಲ್ಲಸಮುದ್ರ, ರಾಜು ರೋಣದ, ದಾದು ಮುಂಡರಗಿ, ಅಬ್ಬು ರಾಟಿ, ಮಹಮ್ಮದಲಿ ಅತ್ತಾರ, ಮಾಬುಲಿ ಧಾರವಾಡ, ನವೀನ ಭಂಡಾರಿ, ಕುತ್ತೇಜಾ ದೊಡ್ಡಮನಿ, ಯಲ್ಲಪ್ಪ ಸಾತಪುತೆ, ಶಿವಾಜಿ ಮಧುರಕರ ಮುಂತಾದವರಿದ್ದರು.

> ನಮ್ಮ ಸಂಘಟನೆಯ ವತಿಯಿಂದ ಹೋರಾಟ ಮಾಡಿ ಮನವಿಪತ್ರ ಸಲ್ಲಿಸಿದಾಗ ಕಾಟಾಚಾರಕ್ಕೆ ಜಿಲ್ಲಾಡಳಿತದ ಭವನದಲ್ಲಿ ಸಭೆ ನಡೆಸಿ ತಾವು ಮಾಡಿದ ಭ್ರಷ್ಟತೆಯನ್ನು ಮುಚ್ಚಿ ಹಾಕಲು ಈ ರೀತಿ ಸಭೆ ನಡೆಸುತ್ತಾರೆ. ಈ ಭ್ರಷ್ಟಾಚಾರದಲ್ಲಿ ಮುಖ್ಯ ಪಾತ್ರದಲ್ಲಿರುವ ಜಿಲ್ಲಾ ಯೋಜನಾ ನಿರ್ದೇಶಕರು, ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯ ಆ.ಖ.ಆ.ಔ ಇವರನ್ನು ಅಮಾನತು ಮಾಡುವರೆಗೂ ನಿರಂತರ ಧರಣಿ ಪ್ರತಿಭಟನೆ ಮಾಡಲಾಗುವುದೆಂದು ಗದಗ ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳ ಸಂಘಟನೆಯ ಮುಖಂಡರು ಜಿಲ್ಲಾ ಸಮಿತಿ ತೀರ್ಮಾನಿಸಲಾಗಿದೆ ಎಂದು ಭಾಷಾಸಾಬ ಮಲ್ಲಸಮುದ್ರ ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka